ಸಂಪುಟ: 11 ಸಂಚಿಕೆ: 160 ಪುಟ: 4+2 ಬೆಲೆ : 3.00 ಬುಧವಾರ, ಜುಲೈ 29, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 160 Pages : 4+2 Rate : 3.00 Wednesday July 29, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

### ಆ. 15ರ ಸ್ವಾತಂತ್ರ್ಯ ದಿನಾಚರಣೆ ಶಿಷ್ಟಾಚಾರ, ಶಿಸ್ತು ಮತ್ತು ಅರ್ಥಪೂರ್ಣವಾಗಿ ನಡೆಯಲಿ: ಡಿಸಿ ಸೂಚನೆ

# ಅದ್ದೂರಿ ಸ್ವಾತಂತ್ರ್ಯೋತ್ಸವಕ್ಕೆ ಜಿಲ್ಲಾಡಳಿತ ಸಜ್ಜು

**ವಿಜಯಸಾಕ್ಷಿ ಸುದ್ದಿ, ಗದಗ**

ಆಗಸ್ಟ್ 15ರಂದು ನಡೆಯಲಿರುವ ಸ್ವಾತಂತ್ರ್ಯ ದಿನಾಚರಣೆಯನ್ನು ರಾಷ್ಟ್ರಹಬ್ಬದ ಘನತೆಗೆ ತಕ್ಕಂತೆ ಶಿಷ್ಟಾಚಾರ ಪಾಲನೆಯೊಂದಿಗೆ ಅರ್ಥಪೂರ್ಣವಾಗಿ, ಶಿಸ್ತುಬದ್ಧವಾಗಿ ಹಾಗೂ ಅದ್ದೂರಿಯಾಗಿ ಆಚರಿಸಲು ಎಲ್ಲ ಇಲಾಖೆಗಳು ಸಮನ್ವಯದಿಂದ ಅಗತ್ಯ ಸಿದ್ಧತೆಗಳನ್ನು ಪೂರ್ಣಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಡಳಿತ ಭವನದಲ್ಲಿ ಮಂಗಳವಾರ ನಡೆದ ಸ್ವಾತಂತ್ರ್ಯ ದಿನಾಚರಣೆ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸ್ವಾತಂತ್ರ್ಯ ದಿನಾಚರಣೆ ರಾಷ್ಟ್ರದ ಗೌರವ ಮತ್ತು ಹೆಮ್ಮೆಯ ಸಂಕೇತವಾಗಿದ್ದು, ಕಾರ್ಯಕ್ರಮದ ಪ್ರತಿಯೊಂದು ಹಂತದಲ್ಲೂ ಸರ್ಕಾರದ ಶಿಷ್ಟಾಚಾರ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಆಹ್ವಾನ ಪತ್ರಿಕೆಗಳ ಮುದ್ರಣ, ಅತಿಥಿಗಳ ಆಸನ ವ್ಯವಸ್ಥೆ, ವೇದಿಕೆ ಸಿದ್ಧತೆ ಸೇರಿದಂತೆ ಎಲ್ಲ ವ್ಯವಸ್ಥೆಗಳು ಯಾವುದೇ ಲೋಪವಾಗದಂತೆ ನಿರ್ವಹಿಸಬೇಕು ಎಂದು ಸೂಚಿಸಿದರು.

ರಾಜ್ಯ ಸರ್ಕಾರದ ಶಿಷ್ಟಾಚಾರ ನಿಯಮಾವಳಿಯಂತೆ ಜನಪ್ರತಿನಿಧಿಗಳು, ಮಾಜಿ ಜನಪ್ರತಿನಿಧಿಗಳು, ಸ್ವಾತಂತ್ರ್ಯ ಹೋರಾಟಗಾರರ ಕುಟುಂಬಸ್ಥರು, ಹಿರಿಯ ನಾಗರಿಕರು, ವಿವಿಧ ಕ್ಷೇತ್ರಗಳ ಗಣ್ಯರು ಹಾಗೂ ಸಾರ್ವಜನಿಕರಿಗೆ ಸಕಾಲದಲ್ಲಿ ಆಹ್ವಾನ ನೀಡಬೇಕು. ಯಾವುದೇ ಅರ್ಹ ವ್ಯಕ್ತಿ ಆಹ್ವಾನದಿಂದ ವಂಚಿತರಾಗದಂತೆ ಅಧಿಕಾರಿಗಳು ವಿಶೇಷ ಕಾಳಜಿ ವಹಿಸಬೇಕು ಎಂದು ತಿಳಿಸಿದರು. ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಧ್ವಜಾರೋಹಣ, ಗೌರವ ವಂದನೆ, ಪಥಸಂಚಲನ, ಸಾಂಸ್ಕೃತಿಕ ಕಾರ್ಯಕ್ರಮ, ಕುಡಿಯುವ ನೀರು, ಶೌಚಾಲಯ, ವೈದ್ಯಕೀಯ ನೆರವು, ಅಗ್ನಿಶಾಮಕ ವ್ಯವಸ್ಥೆ, ತುರ್ತು ನಿರ್ಗಮನ ಹಾಗೂ ವಾಹನ ನಿಲುಗಡೆ ವ್ಯವಸ್ಥೆ ಸೇರಿದಂತೆ ಎಲ್ಲ ಮೂಲಸೌಲಭ್ಯಗಳನ್ನು ಮುಂಚಿತವಾಗಿಯೇ ಸಿದ್ಧಪಡಿಸುವಂತೆ ಸಂಬಂಧಿಸಿದ ಇಲಾಖೆಗಳಿಗೆ ನಿರ್ದೇಶನ ನೀಡಿದರು.

ನಗರದ ಪ್ರಮುಖ ವೃತ್ತಗಳು, ಸರ್ಕಾರಿ ಕಚೇರಿಗಳು ಹಾಗೂ ರಾಷ್ಟ್ರ ನಾಯಕರ ಪ್ರತಿಮೆಗಳಿರುವ ಸ್ಥಳಗಳ ಸ್ವಚ್ಛತೆಗೆ ಆದ್ಯತೆ ನೀಡಿ, ರಸ್ತೆಗಳನ್ನು ಅಲಂಕರಿಸುವ ಮೂಲಕ ರಾಷ್ಟ್ರಹಬ್ಬಕ್ಕೆ ತಕ್ಕ ವಾತಾವರಣ ನಿರ್ಮಿಸಬೇಕು ಎಂದು ನಗರಸಭೆ ಅಧಿಕಾರಿಗಳಿಗೆ ಸೂಚಿಸಿದರು.

ಶಾಲಾ-ಕಾಲೇಜು ವಿದ್ಯಾರ್ಥಿಗಳು, ಎನ್ ಸಿಸಿ, ಎನ್‌ಎಸ್‌ಎಸ್, ಸ್ಕೌಟ್ಸ್ ಮತ್ತು ಗೈಡ್ಸ್, ಪೊಲೀಸ್ ಹಾಗೂ ಇತರೆ ತಂಡಗಳ ಪಥಸಂಚಲನದ ಪೂರ್ವಾಭ್ಯಾಸವನ್ನು ನಿಗದಿತ ವೇಳಾಪಟ್ಟಿಯಂತೆ ನಡೆಸಬೇಕು. ಸಂಜೆ ವೇಳೆ ದೇಶಭಕ್ತಿ, ರಾಷ್ಟ್ರೀಯ ಏಕತೆ ಹಾಗೂ ಕನ್ನಡದ ಸಾಂಸ್ಕೃತಿಕ ವೈಭವ ಬಿಂಬಿಸುವ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸುವಂತೆ ತಿಳಿಸಿದರು. ಸ್ವಾತಂತ್ರ್ಯ ದಿನಾಚರಣೆಯ ವೇಳೆ ವಿದ್ಯುತ್ ಪೂರೈಕೆಯಲ್ಲಿ ಯಾವುದೇ ವ್ಯತ್ಯಯವಾಗದಂತೆ ಹೆಸ್ಕಾಂ ಅಧಿಕಾರಿಗಳು ಅಗತ್ಯ ಮುನ್ನೆಚ್ಚರಿಕೆ ವಹಿಸಬೇಕು. ಪರ್ಯಾಯ ವಿದ್ಯುತ್ ವ್ಯವಸ್ಥೆ, ಜನರೇಟರ್, ಧ್ವನಿವರ್ಧಕ ಹಾಗೂ ಬೆಳಕಿನ ವ್ಯವಸ್ಥೆಯನ್ನು ಮುಂಚಿತವಾಗಿ ಪರಿಶೀಲಿಸಿ ಸಿದ್ಧವಾಗಿರಿಸಬೇಕು ಎಂದು ಸೂಚಿಸಿದರು.

ಪೊಲೀಸ್ ಇಲಾಖೆ ಭದ್ರತೆ ಹಾಗೂ ಸಂಚಾರ ನಿಯಂತ್ರಣ, ಆರೋಗ್ಯ ಇಲಾಖೆ ವೈದ್ಯಕೀಯ ತಂಡ ಮತ್ತು ಆಂಬ್ಯುಲೆನ್ಸ್, ಅಗ್ನಿಶಾಮಕ ಇಲಾಖೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು. ಎಲ್ಲ ಇಲಾಖೆಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಿ ರಾಷ್ಟ್ರೋತ್ಸವವನ್ನು ಯಶಸ್ವಿಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಕರೆ ನೀಡಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಡಿವೈಎಸ್ಪಿ ವಿದ್ಯಾನಂದ ನಾಯಕ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದು, ಸಿದ್ಧತೆಗಳ ಕುರಿತು ಮಾಹಿತಿ ನೀಡಿದರು.



**ರಾಷ್ಟ್ರಹಬ್ಬದ ಗೌರವಕ್ಕೆ ಧಕ್ಕೆಯಾಗದಂತೆ ಪ್ರತಿಯೊಂದು ವ್ಯವಸ್ಥೆಯನ್ನು ಶಿಷ್ಟಾಚಾರ ಹಾಗೂ ಶಿಸ್ತುಬದ್ಧವಾಗಿ ಪೂರ್ಣಗೊಳಿಸಿ, ಸ್ವಾತಂತ್ರ್ಯ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಬೇಕು.**

**- ಸಿ.ಎನ್. ಶ್ರೀಧರ,** ಜಿಲ್ಲಾಧಿಕಾರಿ, ಗದಗ

## ಲಕ್ಷ್ಮೇಶ್ವರದಲ್ಲಿ ಇಂದು ಗುರುಪೂರ್ಣಿಮಾ ಮಹೋತ್ಸವ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಹಿಂದೂ ಜನಜಾಗೃತಿ ಸಮಿತಿಯ ವತಿಯಿಂದ ಗುರುಪೂರ್ಣಿಮೆ ಅಂಗವಾಗಿ ಜುಲೈ 29ರಂದು ದೇಶದಾದ್ಯಂತ 64 ಸ್ಥಳಗಳಲ್ಲಿ ಟಿಗುರುಪೂರ್ಣಿಮಾ ಮಹೋತ್ಸವಟಿ ಆಯೋಜಿಸಲಾಗಿದ್ದು, ಲಕ್ಷ್ಮೇಶ್ವರದಲ್ಲಿಯೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ. ಪಟ್ಟಣದ ಶ್ರೀ ರಂಭಾಪುರಿ ಜಗದ್ಗುರು ಕಲ್ಯಾಣ ಮಂಟಪದಲ್ಲಿ ಸಂಜೆ 5.30 ಗಂಟೆಗೆ ನಡೆಯುವ ಮಹೋತ್ಸವದಲ್ಲಿ ವ್ಯಾಸಪೂಜೆ, ಗುರುಪೂಜೆ, ನಾಮಜಪ, ಧರ್ಮರಕ್ಷಣೆ ಕುರಿತು ಉಪನ್ಯಾಸ, ಸ್ವಸಂರಕ್ಷಣೆಯ ಪ್ರಾತ್ಯಕ್ಷಿಕೆ ಹಾಗೂ ಗ್ರಂಥ ಮತ್ತು ಪೋಸ್ಟರ್ ಪ್ರದರ್ಶನ ಆಯೋಜಿಸಲಾಗಿದೆ. ಸಮಸ್ತ ಹಿಂದೂಗಳು ಕುಟುಂಬ ಸಮೇತರಾಗಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸಬೇಕು ಎಂದು ಹಿಂದೂ ಜನಜಾಗೃತಿ ಸಮಿತಿಯ ವೆಂಕಟರಮಣ ನಾಯಕ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

## ಅಶ್ಲೀಲ ವಿಡಿಯೋ ಹಂಚಿಕೆ; ಪ್ರಕರಣ ದಾಖಲು

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಅಪ್ರಾಪ್ತ ಬಾಲಕಿಯೊಬ್ಬಳ ಗೌಪ್ಯತೆಗೆ ಧಕ್ಕೆ ತರುವ ರೀತಿಯ ಅಶ್ಲೀಲ ವಿಡಿಯೋವನ್ನು ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್ ಮಾಡಿ ಹಂಚಿಕೊಂಡ ಆರೋಪದಡಿ ಮಾಬುಸಾಬ ದಿವಾನಸಾಬ ಥಾಲಾಯತ ವಿರುದ್ಧ ಶಿರಹಟ್ಟಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಜುಲೈ 27ರಂದು ಬೆಳಿಗ್ಗೆ ಸುಮಾರು 8 ಗಂಟೆಗೆ, ಆರೋಪಿಯು ತನ್ನ ಮೊಬೈಲ್ ಮೂಲಕ ಫೇಸ್‌ಬುಕ್ ಹಾಗೂ ಇನ್‌ಸ್ಟಾಗ್ರಾಂನಲ್ಲಿ ಕೆಲ ಪುರುಷರು ಬಾಲಕಿಯೊಂದಿಗೆ ಲೈಂಗಿಕವಾಗಿ ವರ್ತಿಸುತ್ತಿರುವ ದೃಶ್ಯಾವಳಿಗಳಿರುವ ಅಶ್ಲೀಲ ವಿಡಿಯೋವನ್ನು ಪೋಸ್ಟ್ ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಹರ್ರಿಬಿಟ್ಟಿದ್ದಾನೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ. ವಿಡಿಯೋದಲ್ಲಿದ್ದ ಬಾಲಕಿ ಅಪ್ರಾಪ್ತೆಯಂತೆ ಕಂಡುಬಂದಿದ್ದರೂ, ಆಕೆಯ ಗೌಪ್ಯತೆಯನ್ನು ಕಾಯ್ದುಕೊಳ್ಳದೇ, ಘಟನೆಯ ಬಗ್ಗೆ ಯಾವುದೇ ಪರಿಪೂರ್ಣ ಹಾಗೂ ವಿಶ್ವಾಸಾರ್ಹ ಮಾಹಿತಿ ಇಲ್ಲದಿದ್ದರೂ, ಆಕೆಯ ಚಾರಿತ್ರ್ಯಕ್ಕೆ ಧಕ್ಕೆ ತರುವ ರೀತಿಯಲ್ಲಿ ವಿಡಿಯೋವನ್ನು ಪ್ರಸಾರ ಮಾಡಿರುವುದರಿಂದ ಮಹಿಳೆಯರ ಗೌರವಕ್ಕೆ ಧಕ್ಕೆ ಉಂಟುಮಾಡುವ ಹಾಗೂ ಸಾಮಾಜಿಕ ಸ್ವಾಸ್ಥ್ಯ ಹದಗೆಡಿಸುವ ಕೃತ್ಯ ಎಸಗಲಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಈ ಸಂಬಂಧ ಸರ್ಕಾರದ ಪರವಾಗಿ ಪಿಎಸ್‌ಐ ಈರಪ್ಪ ರಿತ್ತಿ ನೀಡಿದ ದೂರಿನ ಮೇರೆಗೆ ಶಿರಹಟ್ಟಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರಿದಿದೆ.

## ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಯೋಜನೆಗಳ ಸದುಪಯೋಗ ಪಡೆದುಕೊಳ್ಳಿ



**ವಿಜಯಸಾಕ್ಷಿ ಸುದ್ದಿ, ಗದಗ**

ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದವರಿಗೆ ಸ್ವಯಂ ಉದ್ಯೋಗ ಆರಂಭಿಸಲು ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ವತಿಯಿಂದ 2026-27ನೇ ಸಾಲಿನ ಟಿವಿಪ್ರ ಸ್ವ ಉದ್ಯಮ ನೇರ ಸಾಲ ಯೋಜನೆಟಿ ಜಾರಿಗೊಳಿಸಲಾಗಿದ್ದು, ಆಗಸ್ಟ್ 31ರವರೆಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಮಂಡಳಿಯ ನಿರ್ದೇಶಕ ಗುರುರಾಜ ಬಳಗಾನೂರ ತಿಳಿಸಿದರು. ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗುಡಿಕೈಗಾರಿಕೆ, ಸಣ್ಣ ಕೈಗಾರಿಕೆ, ಹೋಟೆಲ್ (ಕ್ಯಾಟರಿಂಗ್), ಅಂಗಡಿ, ಟೈಲರಿಂಗ್, ಟ್ಯಾಕ್ಸಿ ಹಾಗೂ ಹಸು ಸಾಕಾಣಿಕೆಯಂತಹ ಸ್ವಯಂ ಉದ್ಯೋಗ ಕೈಗೊಳ್ಳಲು ಯೋಜನೆಯಡಿ ಆರ್ಥಿಕ ನೆರವು ನೀಡಲಾಗುವುದು. ಅರ್ಹ ಫಲಾನುಭವಿಗಳು ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು. 2025-26ನೇ ಸಾಲಿನಲ್ಲಿ ಬ್ರಾಹ್ಮಣ ಅಭಿವೃದ್ಧಿ ಮಂಡಳಿಗೆ ರಾಜ್ಯ ಸರ್ಕಾರ ₹25 ಕೋಟಿ ಅನುದಾನ ಬಿಡುಗಡೆ ಮಾಡಿದ್ದು, ಅದರಲ್ಲಿ ₹20 ಕೋಟಿ ವೆಚ್ಚ ಮಾಡಿ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿದೆ. ಟಿವಿಶ್ವಾಮಿತ್ರ ಪ್ರತಿಭಾ ಪುರಸ್ಕಾರಟಿ ಯೋಜನೆಯಡಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ₹15 ಸಾವಿರ ಪ್ರೋತ್ಸಾಹಧನ ನೀಡಲಾಗುತ್ತಿದೆ ಎಂದು ಹೇಳಿದರು.

ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ನೋಂದಾಯಿತ ಸಂಸ್ಥೆಗಳಲ್ಲಿ ತರಬೇತಿ ಪಡೆಯುವ ಅಭ್ಯರ್ಥಿಗಳಿಗೆ ವಾರ್ಷಿಕ ₹1 ಲಕ್ಷ ಸಹಾಯಧನ ನೀಡುವ ಯೋಜನೆಯೂ ಜಾರಿಯಲ್ಲಿದೆ. ಬ್ರಾಹ್ಮಣ ಅಭಿವೃದ್ಧಿ ಮಂಡಳಿಗೆ ಕನಿಷ್ಠ ₹100 ಕೋಟಿ ಅನುದಾನ ನೀಡುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಮಾಡಲಾಗಿದ್ದು, ಅವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ. ಕಿತ್ತೂರು ಕರ್ನಾಟಕ ಭಾಗದ ಬ್ರಾಹ್ಮಣ ಸಮುದಾಯದವರು ಸರ್ಕಾರದ ಯೋಜನೆಗಳ ಪ್ರಯೋಜನವನ್ನು ಹೆಚ್ಚಿನ ಪ್ರಮಾಣದಲ್ಲಿ ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

ಯೋಜನೆಗೆ ಅರ್ಜಿ ಸಲ್ಲಿಸಲು ಕರ್ನಾಟಕದ ಖಾಯಂ ನಿವಾಸಿಯಾಗಿರಬೇಕು. ಬ್ರಾಹ್ಮಣ ಸಮುದಾಯದ ಸಾಮಾನ್ಯ ವರ್ಗಕ್ಕೆ ಸೇರಿದ ಆರ್ಥಿಕವಾಗಿ ಹಿಂದುಳಿದ ಪ್ರಮಾಣಪತ್ರ ಹೊಂದಿರಬೇಕು. ವಯಸ್ಸು 18ರಿಂದ 65 ವರ್ಷದೊಳಗಿರಬೇಕು. ಒಂದು ಕುಟುಂಬದಿಂದ ಒಬ್ಬರಿಗೆ ಮಾತ್ರ ಅವಕಾಶವಿದ್ದು, ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅವಕಾಶವಿಲ್ಲ. ಸಾಲದ ಉದ್ದೇಶವನ್ನು ಆನ್‌ಲೈನ್ ಅರ್ಜಿಯಲ್ಲಿ ಸ್ಪಷ್ಟವಾಗಿ ನಮೂದಿಸಬೇಕು. ಅರ್ಜಿದಾರರ ಆಧಾರ್‌ಗೆ ಮೊಬೈಲ್ ಸಂಖ್ಯೆ ಲಿಂಕ್ ಆಗಿದ್ದು, ಬ್ಯಾಂಕ್ ಖಾತೆ ಎನ್‌ಪಿಸಿಐ ಸೀಡ್ ಆಗಿರಬೇಕು ಎಂದು ವಿವರಿಸಿದರು.

ಈ ಸಂದರ್ಭದಲ್ಲಿ ಬ್ರಾಹ್ಮಣ ಸಂಘದ ಜಿಲ್ಲಾಧ್ಯಕ್ಷ ವೆಂಕಟೇಶ್ ಕುಲಕರ್ಣಿ, ಅನಿಲ ತೆಂಬದಮನಿ, ಕೃಷ್ಣಜಿ ನಾಡಗೇರ, ನಾಗರಾಜ ಕುಲಕರ್ಣಿ, ಕಿರಣ್ ಪೂಜಾರ, ಮೇಘಾ ಮುದಗಲ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಬರಪೀಡಿತ ಜಿಲ್ಲೆಯನ್ನಾಗಿ ಘೋಷಿಸಲು ರೈತ ಸಂಘ ಒತ್ತಾಯ



**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಭೀಕರ ಬರಗಾಲದಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ಬೆಳೆ ನಷ್ಟಕ್ಕೊಳಗಾದ ಪ್ರತಿ ಎಕರೆಗೆ ₹50 ಸಾವಿರ ಪರಿಹಾರ ನೀಡಬೇಕು. ಜಿಲ್ಲೆಯನ್ನು ತಕ್ಷಣವೇ ಬರ್‍ಯಪೀಡಿತ ಎಂದು ಘೋಷಿಸಬೇಕು. ಇಲ್ಲವಾದರೆ ಜಿಲ್ಲೆಯಾದ್ಯಂತ ಹೋರಾಟ ನಡೆಸಿ ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ ಹಮ್ಮಿಕೊಳ್ಳಲಾಗುವುದು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾ ಘಟಕದ ಅಧ್ಯಕ್ಷ ಶಂಕರಗೌಡ ಜಾಯನಗೌಡ್ರ ಎಚ್ಚರಿಕೆ ನೀಡಿದರು.

ನಗರದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬರ ಪರಿಸ್ಥಿತಿ ಕುರಿತು ಜಿಲ್ಲಾಧಿಕಾರಿ ಹಾಗೂ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗೂ ಮನವಿ ಸಲ್ಲಿಸಲಾಗಿದ್ದರೂ ಇದುವರೆಗೆ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಜಿಲ್ಲೆಯ ಹಲವು ಕಡೆ ಮಳೆಮಾಪನ ಯಂತ್ರಗಳು ಕಾರ್ಯನಿರ್ವಹಿಸುತ್ತಿಲ್ಲ. ಇದರಿಂದ ಮಳೆಯ ನಿಖರ ಅಂಕಿಅಂಶಗಳು ಲಭ್ಯವಾಗದೇ ವಾಸ್ತವ ಪರಿಸ್ಥಿತಿ ಸರ್ಕಾರದ ಗಮನಕ್ಕೆ ಬರುತ್ತಿಲ್ಲ ಎಂದು ಆರೋಪಿಸಿದರು.

ಜಿಲ್ಲೆಯನ್ನು ತಕ್ಷಣವೇ ಬರ್‍ಯಪೀಡಿತ ಪ್ರದೇಶ ಎಂದು ಘೋಷಿಸಬೇಕು. ರೈತರ ಜಾನುವಾರುಗಳ ರಕ್ಷಣೆಗೆ ಮೇವು ಬ್ಯಾಂಕ್‌ಗಳನ್ನು ಆರಂಭಿಸಬೇಕು. ಕೆರೆ ತುಂಬಿಸುವ ಯೋಜನೆಯನ್ನು ತಕ್ಷಣ ಸಕ್ರಿಯಗೊಳಿಸಬೇಕು. ಕಳೆದ ವರ್ಷ ತಂತ್ರಾಂಶದ ದೋಷದಿಂದ ಬೆಳೆ ವಿಮೆ ಹಾಗೂ ಬೆಳೆ ಪರಿಹಾರ ವಿತರಣೆಯಲ್ಲಿ ಅನೇಕ ರೈತರು ವಂಚಿತರಾಗಿದ್ದಾರೆ. ಈ ಬಾರಿ ಅಂತಹ ಸಮಸ್ಯೆ ಮರುಕಳಿಸದಂತೆ ಸರ್ಕಾರ ಅಗತ್ಯ ಮುನ್ನೆಚ್ಚರಿಕೆ ವಹಿಸಬೇಕು ಎಂದು ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ ರವಿ ವಗ್ಗನವರ, ಉಪಾಧ್ಯಕ್ಷ ಗಿರೀಶ ಹೊಸಮನಿ, ಕಾರ್ಯದರ್ಶಿ ಈಶ್ವರ್‍ಯ ಬಿ. ಗದಗಿನ, ತಾಲ್ಲೂಕು ಘಟಕದ ಪ್ರಧಾನ ಕಾರ್ಯದರ್ಶಿ ಶಂಕರಗೌಡ ಪಾಟೀಲ, ಸಂಚಾಲಕ ಶರಣಪ್ಪ ಕಮ್ಮಾರ, ಕಾರ್ಯದರ್ಶಿ ರೇವಣಸಿದ್ದಪ್ಪ ಬಿಡನಾಳ ಉಪಸ್ಥಿತರಿದ್ದರು.

## ಯುಪಿಎಸ್‌ಸಿ ಪೂರ್ವ ತರಬೇತಿಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

2026-27ನೇ ಸಾಲಿನ ಯುಪಿಎಸ್‌ಸಿ ನಾಗರಿಕ ಸೇವಾ ಪರೀಕ್ಷೆಗೆ ಪೂರ್ವಸಿದ್ಧತೆ ನಡೆಸುವ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಉಚಿತ ಊಟ ಹಾಗೂ ವಸತಿಯೊಂದಿಗೆ ಪೂರ್ವ ತರಬೇತಿ ನೀಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ. ಪ್ರವರ್ಗ 1, 2(ಎ), 3(ಎ) ಹಾಗೂ 3(ಬಿ)ಗೆ ಸೇರಿದ ಅರ್ಹ ಅಭ್ಯರ್ಥಿಗಳು ಆಗಸ್ಟ್ 3ರೊಳಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಅಂಗೀಕೃತ ವಿಶ್ವವಿದ್ಯಾಲಯದಿಂದ ಯಾವುದೇ ಪದವಿ ಪಡೆದಿರಬೇಕು. ಅಭ್ಯರ್ಥಿಯ ಕುಟುಂಬದ ವಾರ್ಷಿಕ ಆದಾಯ ₹5 ಲಕ್ಷದೊಳಗಿರಬೇಕು. ಅಭ್ಯರ್ಥಿಗಳ ಆಯ್ಕೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳು, ಪ್ರವರ್ಗ ಹಾಗೂ ಮೀಸಲಾತಿ ಆಧಾರದ ಮೇಲೆ ಮಾಡಲಾಗುತ್ತದೆ. ಪರೀಕ್ಷೆಯ ದಿನಾಂಕ, ಸಮಯ ಹಾಗೂ ಕೇಂದ್ರಗಳ ವಿವರವನ್ನು ನಂತರ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳಿಗೆ ಇಲಾಖೆಯಿಂದಲೇ ಉಚಿತ ವಸತಿ ಹಾಗೂ ಊಟದೊಂದಿಗೆ ತರಬೇತಿ ನೀಡಲಾಗಲಿದ್ದು, ಪ್ರತ್ಯೇಕ ತರಬೇತಿ ಭತ್ಯೆ ನೀಡುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವೆಬ್‌ಸೈಟ್ ಅಥವಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಎಸ್‌ಐಆರ್ ಯಶಸ್ಸಿಗೆ ಸಾರ್ವಜನಿಕರ ಸಹಕಾರ ಅಗತ್ಯ




**ವಿಜಯಸಾಕ್ಷಿ ಸುದ್ದಿ, ಗದಗ**

ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ-2026 (ಎಸ್‌ಐಆರ್) ಕುರಿತು ಯಾವುದೇ ಊಹಾಪೋಹಗಳಿಗೆ ಕಿವಿಗೊಡದೆ, ಚುನಾವಣಾ ಆಯೋಗದ ವೇಳಾಪಟ್ಟಿಯಂತೆ ಬಿಎಲ್‌ಒಗಳಿಗೆ ಸಮರ್ಪಕ ಮಾಹಿತಿ ನೀಡಿ ಪ್ರಕ್ರಿಯೆಗೆ ಸಹಕರಿಸಬೇಕು. ಯಾವುದೇ ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ಪಾರದರ್ಶಕ ಹಾಗೂ ನಿಖರ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವುದೇ ಈ ವಿಶೇಷ ಪರಿಷ್ಕರಣೆಯ ಉದ್ದೇಶವಾಗಿದೆ ಎಂದು ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಸ್ವೀಪ್ ಸಮಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಸ್ನಾತಕೋತ್ತರ ಅಧ್ಯಯನ ಕೇಂದ್ರದ ಸಂಯುಕ್ತಾಶ್ರಯದಲ್ಲಿ ನರಸಾಪುರ ಕೈಗಾರಿಕಾ ವಸಾಹತು ಆವರಣದಲ್ಲಿ ಮಂಗಳವಾರ ಆಯೋಜಿಸಿದ್ದ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ-2026 (ಎಸ್‌ಐಆರ್) ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರಜಾಪ್ರಭುತ್ವದ ಸದೃಢತೆಗೆ ನಿಖರ ಮತದಾರರ ಪಟ್ಟಿ ಅತ್ಯಂತ ಅವಶ್ಯಕವಾಗಿದೆ. ಈ ಹಿನ್ನೆಲೆಯಲ್ಲಿ ಮತದಾರರ ಪಟ್ಟಿಯನ್ನು ಸಂಪೂರ್ಣವಾಗಿ ಹೊಸದಾಗಿ ಸಿದ್ಧಪಡಿಸುವ ಪ್ರಕ್ರಿಯೆ ನಡೆಯುತ್ತಿದ್ದು, ಈ ಹಿಂದೆ ಪಟ್ಟಿಯಲ್ಲಿದ್ದ ಮತದಾರರು ಈಗಲೂ ಅದೇ ಸ್ಥಳದಲ್ಲಿದ್ದಾರೆಯೇ, ಹೊಸದಾಗಿ ಸೇರ್ಪಡೆಯಾಗಬೇಕಾದವರು ಯಾರು ಎಂಬುದನ್ನು ಗುರುತಿಸಿ ದೃಢೀಕರಿಸುವ ಉದ್ದೇಶದಿಂದ ಎಸ್‌ಐಆರ್-2026 ಕಾರ್ಯ ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಹಾಯಕ ಕಾನೂನು ಅಭಿರಕ್ಷಕ ಗುರುರಾಜ ಬಿ. ಗೌರಿ ತಿಳಿಸಿದರು.

ಬಿಎಲ್‌ಒಗಳು ಮನೆ-ಮನೆಗೆ ಭೇಟಿ ನೀಡಿದಾಗ ಸಾರ್ವಜನಿಕರು ಅಗತ್ಯ ದಾಖಲೆಗಳನ್ನು ನೀಡಿ ಸೂಕ್ತ ನಮೂನೆಗಳನ್ನು ಭರ್ತಿ ಮಾಡಿಕೊಡಬೇಕು. ಇದರಿಂದ ನಿಖರ ಮತದಾರರ ಪಟ್ಟಿ ಸಿದ್ಧಪಡಿಸಲು ಅನುಕೂಲವಾಗುತ್ತದೆ. ಪ್ರತಿಯೊಬ್ಬ ಅರ್ಹ ನಾಗರಿಕರು ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗಿರುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಅವರು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಸ್ನಾತಕೋತ್ತರ ಅಧ್ಯಯನ ಕೇಂದ್ರದ ಪ್ರಾಂಶುಪಾಲ ಡಾ. ಶಿವಪ್ಪ ಮರಿಬಸಪ್ಪ ಕುರಿ ಮಾತನಾಡಿ, ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ-2026ರ ಮಹತ್ವವನ್ನು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಅರಿತುಕೊಂಡು ಚುನಾವಣಾ ಆಯೋಗದ ಕಾರ್ಯಕ್ಕೆ ಸಹಕರಿಸಬೇಕು ಎಂದು ಹೇಳಿದರು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಸ್ನಾತಕೋತ್ತರ ಅಧ್ಯಯನ ಕೇಂದ್ರದ ಸಹಾಯಕ ಪ್ರಾಧ್ಯಾಪಕ ಡಾ. ಪಿ.ಎಚ್. ಕಾರಕೊಪ್ಪ ಸ್ವಾಗತಿಸಿದರು. ಐಕ್ಯೂಎಸಿ ಸಂಚಾಲಕ ಖಲೀಲ್ ಅಹ್ಮದ್ ಚಿಕ್ಕೇರೂರ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಸಹಾಯಕ ಪ್ರಾಧ್ಯಾಪಕ ಮಲಪ್ಪ ಹೊಸೂರು ಕಾರ್ಯಕ್ರಮ ನಿರ್ವಹಿಸಿ, ಡಾ. ಮಹಾದೇವ ವಡೇಕಾರ ವಂದಿಸಿದರು.

## ಶವವಾಹನ ಬಾಡಿಗೆ ಇಳಿಕೆಗೆ ಸಾರ್ವಜನಿಕರ ಆಗ್ರಹ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಪುರಸಭೆ ಹೊಸದಾಗಿ ಖರೀದಿಸಿರುವ ಶವವಾಹನ (ಮುಕ್ತಿವಾಹಿನಿ) ಸೇವೆಗೆ ನಿಗದಿಪಡಿಸಿರುವ ₹2,000 ಬಾಡಿಗೆ ಶುಲ್ಕವನ್ನು ಕಡಿಮೆ ಮಾಡಿ ₹500ಕ್ಕೆ ನಿಗದಿಪಡಿಸಬೇಕು ಎಂದು ಸಾರ್ವಜನಿಕರು ಮಂಗಳವಾರ ಪುರಸಭೆ ಮುಖ್ಯಾಧಿಕಾರಿಗೆ ಮನವಿ ಸಲ್ಲಿಸಿದರು.

ಮನವಿ ಸಲ್ಲಿಸಿದ ಬಳಿಕ ಮಾತನಾಡಿದ ನಾಗರಾಜ ಚಿಂಚಲಿ, ಈ ಹಿಂದೆ ಬಳಕೆಯಲ್ಲಿದ್ದ ಶವವಾಹನ ಸಂಪೂರ್ಣ ಶಿಥಿಲಗೊಂಡಿದ್ದರಿಂದ ಸಾರ್ವಜನಿಕರಿಗೆ ತೀವ್ರ ತೊಂದರೆಯಾಗುತ್ತಿತ್ತು. ಹೊಸ ವಾಹನ ಖರೀದಿಸಿರುವುದು ಸ್ವಾಗತಾರ್ಹ ಕ್ರಮವಾದರೂ, ಏಕಾಏಕಿ ₹2,000 ಸೇವಾ ಶುಲ್ಕ ನಿಗದಿಪಡಿಸಿರುವುದು ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳಿಗೆ ಭಾರವಾಗಲಿದೆ ಎಂದು ಹೇಳಿದರು.

ಜನಸಾಮಾನ್ಯರ ಆರ್ಥಿಕ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಶವವಾಹನದ ಬಾಡಿಗೆ ದರವನ್ನು ₹500ಕ್ಕೆ ನಿಗದಿಪಡಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಬೇಕು ಎಂದು ಅವರು ಆಗ್ರಹಿಸಿದರು.

ಮನವಿ ಸ್ವೀಕರಿಸಿದ ಪುರಸಭೆ ವ್ಯವಸ್ಥಾಪಕಿ ಮಂಜುಳಾ ಹೂಗಾರ, ಈ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಯಲ್ಲಪ್ಪ ಜಾಲಗಾರ, ಬಸವರಾಜ ದೊಡ್ಡಮನಿ, ಶಿವಣ್ಣ ಕಟಗಿ, ಸದಾನಂದ ನಂದೆಣ್ಣವರ, ಪ್ರಕಾಶ ಕೊಂಚಿಗೇರಿಮಠ, ಟಾಕಪ್ಪ ಸಾತಪೂತೆ, ಎಂ.ಆರ್. ಪಾಟೀಲ, ಅಪ್ಪಣ್ಣ ಮುಳಗುಂದ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಸಂಕ್ಷಿಪ್ತ ಸುದ್ದಿಗಳು

### ಇಂದು ಗುರುಪೂರ್ಣಿಮಾ ಮಹೋತ್ಸವ

**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಅಧ್ಯಾತ್ಮ ವಿದ್ಯಾಶ್ರಮದಲ್ಲಿ ಜುಲೈ 29ರಂದು (ಬುಧವಾರ) ಗುರುಪೂರ್ಣಿಮಾ ಅಂಗವಾಗಿ ವಿವಿಧ ಧಾರ್ಮಿಕ ಹಾಗೂ ಆಧ್ಯಾತ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.ಅಂದು ಬೆಳಿಗ್ಗೆ 6 ಗಂಟೆಗೆ ಶ್ರೀ ಗುರಯ್ಯ ಸ್ವಾಮಿ ಹುಲಕೋಟಿ ಅವರಿಂದ ಶ್ರೀಗುರುಗಳಿಗೆ ಹಾಗೂ ಶ್ರೀಚಕ್ರಕ್ಕೆ ರುದ್ರಾಭಿಷೇಕ, ಸಹಸ್ರ ಬಿಲ್ವಾರ್ಚನೆ, ಕುಂಕುಮಾರ್ಚನೆ ಮತ್ತು ನಾಮಾವಳಿ ಪೂಜೆ ನೆರವೇರಲಿದೆ.ಮಧ್ಯಾಹ್ನ 4 ಗಂಟೆಗೆ ಆದಿಶಕ್ತಿ ಬಳಗದ ತಾಯಂದಿರಿಂದ ಸೌಂದರ್ಯ ಲಹರಿ ಹಾಗೂ ಲಲಿತಾ ಸಹಸ್ರನಾಮ ಪಾರಾಯಣ ನಡೆಯಲಿದೆ. ಸಂಜೆ 6 ಗಂಟೆಗೆ ಗುರು ಮಹಾತ್ಮೆ ಕುರಿತು ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.ಕಾರ್ಯಕ್ರಮದ ಸಾನ್ನಿಧ್ಯವನ್ನು ಅಧ್ಯಾತ್ಮ ವಿದ್ಯಾಶ್ರಮದ ಪೂಜ್ಯ ಶಿವಶರಣೆ ಡಾ. ನೀಲಮ್ಮ ತಾಯಿ ಅಸುಂಡಿ ವಹಿಸಲಿದ್ದು, ಅಧ್ಯಕ್ಷತೆಯನ್ನು ಪಂಡಿತ್ ಶ್ರೀ ವಾಸುದೇವ್ ಆಚಾರ್ಯ ಹೂಲಿ ವಹಿಸುವರು. ಗುರುಪೂರ್ಣಿಮೆಯ ಮಹತ್ವದ ಕುರಿತು ಶಿರಹಟ್ಟಿಯ ಎಫ್.ಎಂ. ಡಬಾಲಿ ಪಿಯು ಕಾಲೇಜಿನ ಉಪನ್ಯಾಸಕಿ ಶ್ರೀಮತಿ ಸುಧಾ ಹುಚ್ಚಣ್ಣವರ ವಿಶೇಷ ಉಪನ್ಯಾಸ ನೀಡಲಿದ್ದಾರೆ. ಶ್ರೀ ಎಸ್.ಬಿ. ದೊಡ್ಡಣ್ಣವರ ಅವರಿಂದ ಗುರುವಿನ ಪ್ರಾರ್ಥನೆ ನಡೆಯಲಿದೆ.

ಅಂದಿನ ಕಾರ್ಯಕ್ರಮದ ಭಕ್ತಿ ಸೇವೆಯನ್ನು ನಿವೃತ್ತ ಶಿಕ್ಷಕಿ ಶ್ರೀಮತಿ ಶಾಂತಾ ಹಿರೇವಡೆಯರ್ ಹಾಗೂ ಬಳಗಾನೂರಿನ ಸಿದ್ದಲಿಂಗೇಶ್ ಶಿವಸಿಂಪರ್ ನಿರ್ವಹಿಸಲಿದ್ದಾರೆ.ಭಕ್ತರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಗುರುಪೂರ್ಣಿಮಾ ಮಹೋತ್ಸವದ ಸದುಪಯೋಗ ಪಡೆದುಕೊಳ್ಳುವಂತೆ ಆದಿಶಕ್ತಿ ಬಳಗ ಟ್ರಸ್ಟ್‌ನ ಶ್ರೀಮತಿ ಲಕ್ಷ್ಮಿ ಮುಳುಗುಂದ ಹಾಗೂ ಶಾರದಾ ಕಾತರಕಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಎಸ್‌ಐಆರ್ : 7.61 ಲಕ್ಷ ಫಾರ್ಮ್‌ಗಳ ಡಿಜಿಟಲೀಕರಣ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಚುರುಕುಗೊಂಡಿದ್ದು, ಜುಲೈ 26ರ ವೇಳೆಗೆ 7,61,571 ಎನ್ಯುಮರೇಷನ್ ಫಾರ್ಮ್‌ಗಳನ್ನು ಡಿಜಿಟಲೀಕರಣ ಮಾಡಲಾಗಿದೆ. ಜಿಲ್ಲೆಯಲ್ಲಿ ಒಟ್ಟು 9,02,947 ಮತದಾರರು ಹಾಗೂ 967 ಮತಗಟ್ಟೆಗಳು ಇದ್ದು, ಭಾರತೀಯ ಚುನಾವಣಾ ಆಯೋಗದ ನಿರ್ದೇಶನದಂತೆ ಬೂತ್ ಮಟ್ಟದ ಅಧಿಕಾರಿಗಳು (ಬಿ.ಎಲ್.ಒ.) ಮನೆ-ಮನೆಗೆ ಭೇಟಿ ನೀಡಿ ಮತದಾರರಿಗೆ ಎನ್ಯುಮರೇಷನ್ ಫಾರ್ಮ್ ವಿತರಿಸುತ್ತಿದ್ದಾರೆ.

ಮೂಲ ವೇಳಾಪಟ್ಟಿಯನ್ನು ವಿಸ್ತರಿಸಲಾಗಿದ್ದು, ಆಗಸ್ಟ್ 8ರವರೆಗೆ ಬಿ.ಎಲ್.ಒ.ಗಳು ಮನೆ-ಮನೆಗೆ ತೆರಳಿ ಫಾರ್ಮ್ ವಿತರಿಸುವ ಕಾರ್ಯ ಮುಂದುವರಿಸಲಿದ್ದಾರೆ. ಜುಲೈ 26ರ ವೇಳೆಗೆ ಜಿಲ್ಲೆಯ ಎಲ್ಲಾ 9,02,947 ಎನ್ಯುಮರೇಷನ್ ಫಾರ್ಮ್‌ಗಳನ್ನು ವಿತರಿಸಲಾಗಿದ್ದು, ಅವುಗಳಲ್ಲಿ 7,61,571 ಫಾರ್ಮ್‌ಗಳ ಡಿಜಿಟಲೀಕರಣ ಪೂರ್ಣಗೊಂಡಿದೆ ಎಂದು ಜಿಲ್ಲಾಡಳಿತ ಪ್ರಕಟಣೆಯಲ್ಲಿ ತಿಳಿಸಿದೆ.

### ಮಾಹಿತಿ ಹಕ್ಕು ಕಾಯ್ದೆ ಉಲ್ಲಂಘನೆ: ಅಧಿಕಾರಿಗೆ ದಂಡ, ಶಿಸ್ತು ಕ್ರಮ

**ವಿಜಯಸಾಕ್ಷಿ ಸುದ್ದಿ, ಗದಗ**

ಅರ್ಜಿದಾರರಿಗೆ ಸಕಾಲದಲ್ಲಿ ಮಾಹಿತಿ ನೀಡದೆ ಕರ್ತವ್ಯ ಲೋಪ ಹಾಗೂ ನಿರ್ಲಕ್ಷ್ಯ ತೋರಿದ ಹಿನ್ನೆಲೆಯಲ್ಲಿ ಪಂಚಾಯತ್ ರಾಜ್ ಎಂಜಿನಿಯರಿಂಗ್ ಉಪವಿಭಾಗದ ಅಧಿಕಾರಿಯೊಬ್ಬರಿಗೆ ಕರ್ನಾಟಕ ಮಾಹಿತಿ ಆಯೋಗ ದಂಡ ವಿಧಿಸಿ ಶಿಸ್ತು ಕ್ರಮ ಜರುಗಿಸಿದೆ. 2021ರಲ್ಲಿ ಹುನಗುಂದ ತಾಲೂಕಿನಲ್ಲಿ ಪಂಚಾಯತ್ ರಾಜ್ ಎಂಜಿನಿಯರಿಂಗ್ ಉಪವಿಭಾಗದಲ್ಲಿ ಸಹಾಯಕ ನಿರ್ವಾಹಕ ಅಭಿಯಂತರರಾಗಿ ಕಾರ್ಯನಿರ್ವಹಿಸುತ್ತಿದ್ದ ಅಧಿಕಾರಿಯ ವಿರುದ್ಧ ದಾಖಲಾಗಿದ್ದ ಮೇಲ್ಮನವಿಗಳ ವಿಚಾರಣೆ ನಡೆಸಿದ ಕರ್ನಾಟಕ ಮಾಹಿತಿ ಆಯೋಗದ ಬೆಳಗಾವಿ ಪೀಠ, ಮಾಹಿತಿ ಹಕ್ಕು ಕಾಯ್ದೆ ಉಲ್ಲಂಘನೆಯಾಗಿದೆ ಎಂದು ಕಂಡು ನಾಲ್ಕು ಪ್ರಕರಣಗಳಲ್ಲಿ ತಲಾ ₹5,000 ದಂಡ ವಿಧಿಸಿದೆ. ಅರ್ಜಿದಾರರ ಅರ್ಜಿಗಳಿಗೆ ಕಾಲಮಿತಿಯೊಳಗೆ ಸಮರ್ಪಕ ಮಾಹಿತಿ ನೀಡಬೇಕು. ಮಾಹಿತಿ ನೀಡದೆ ಕರ್ತವ್ಯ ಲೋಪ ಹಾಗೂ ನಿರ್ಲಕ್ಷ್ಯ ತೋರಿದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಿ, ವಿಚಾರಣೆಗೆ ಶಿಫಾರಸು ಮಾಡುವುದರ ಜೊತೆಗೆ ದಂಡವೂ ವಿಧಿಸಲಾಗುವುದು ಎಂದು ರಾಜ್ಯ ಮಾಹಿತಿ ಆಯುಕ್ತ ಪ್ರಕಾಶ ನಾರಾಯಣ ಚನ್ನಾಳ ಪ್ರಕಟಣೆಯಲ್ಲಿ ಎಚ್ಚರಿಸಿದ್ದಾರೆ.

### ಬೆಳೆ ವಿಮೆ ನೋಂದಣಿಗೆ ವಿಳಂಬ ಬೇಡ

**ವಿಜಯಸಾಕ್ಷಿ ಸುದ್ದಿ, ಗದಗ**

2026-27ನೇ ಸಾಲಿನ ಮುಂಗಾರು ಹಂಗಾಮಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ ಅಡಿಯಲ್ಲಿ ಅಧಿಸೂಚಿತ ಬೆಳೆಗಳಿಗೆ ವಿಮೆ ನೋಂದಣಿ ಆರಂಭವಾಗಿದ್ದು, ರೈತರು ಕೊನೆಯ ದಿನಾಂಕದವರೆಗೆ ಕಾಯದೆ ಮುಂಚಿತವಾಗಿ ನೋಂದಣಿ ಮಾಡಿಸಿಕೊಳ್ಳುವಂತೆ ಜಂಟಿ ಕೃಷಿ ನಿರ್ದೇಶಕರು ಸಲಹೆ ನೀಡಿದ್ದಾರೆ.

ಈ ವರ್ಷ ಜಿಲ್ಲೆಗೆ ಇಂಡಸ್‌ಇಂಡ್ ಜನರಲ್ ಇನ್ಸೂರೆನ್ಸ್ ಕಂಪನಿ ಅನುಷ್ಠಾನ ವಿಮಾ ಸಂಸ್ಥೆಯಾಗಿ ಆಯ್ಕೆಯಾಗಿದೆ. ಸರ್ಕಾರದ ಆದೇಶದಂತೆ ಬೆಳೆ ವಿಮೆ ಪ್ರಸ್ತಾವನೆಗಳನ್ನು ಬೆಳೆ ಸಮೀಕ್ಷೆ ವರದಿಯೊಂದಿಗೆ ಪರಿಶೀಲಿಸಿ ಪರಿಗಣಿಸಲಾಗುತ್ತದೆ. ಬೆಳೆ ಸಮೀಕ್ಷೆಯಲ್ಲಿ ಪಾಳು ಅಥವಾ ಕಟಾವು ಪ್ರದೇಶ ಎಂದು ದಾಖಲಾದ ಜಮೀನುಗಳ ವಿಮೆ ಪ್ರಸ್ತಾವನೆಗಳನ್ನು ಪರಿಗಣಿಸುವುದಿಲ್ಲ. ಸಮೀಕ್ಷೆಯಲ್ಲಿ ದಾಖಲಾಗಿರುವ ಬೆಳೆ ಹಾಗೂ ವಿಸ್ತೀರ್ಣವನ್ನೇ ಅಂತಿಮವಾಗಿ ಪರಿಗಣಿಸಲಾಗುತ್ತದೆ. ಬೆಳೆ ಸಮೀಕ್ಷೆ ಆ್ಯಪ್ ಶೀಘ್ರದಲ್ಲೇ ಸ್ಥಗಿತಗೊಳ್ಳಲಿರುವುದರಿಂದ ರೈತರು ತಾವು ಬೆಳೆದ ಬೆಳೆಗಳ ಸಮೀಕ್ಷೆಯನ್ನು ಸ್ವತಃ ಅಥವಾ ಖಾಸಗಿ ನಿವಾಸಿಗಳ ನೆರವಿನಿಂದ ಶೀಘ್ರ ಪೂರ್ಣಗೊಳಿಸಬೇಕು ಎಂದು ಇಲಾಖೆ ತಿಳಿಸಿದೆ. ಜುಲೈ 31ರವರೆಗೆ ಗೋವಿನ ಜೋಳ, ಸಜ್ಜೆ, ತೊಗರಿ, ಶೇಂಗಾ, ಭತ್ತ, ನೀರಾವರಿ ಕೆಂಪು ಮೆಣಸಿನಕಾಯಿ ಹಾಗೂ ಈರುಳ್ಳಿ ಬೆಳೆಗಳಿಗೆ ವಿಮೆ ನೋಂದಣಿ ಅವಕಾಶವಿದೆ. ಬೆಳೆ ಬದಲಾವಣೆ ಮಾಡಬೇಕಾದ ರೈತರು ಜುಲೈ 29ರೊಳಗೆ ಪ್ರಕ್ರಿಯೆ ಪೂರ್ಣಗೊಳಿಸಬೇಕು. ಸೂರ್ಯಕಾಂತಿ, ಮಳೆಆಶ್ರಿತ ಕೆಂಪು ಮೆಣಸಿನಕಾಯಿ ಹಾಗೂ ಮಳೆಆಶ್ರಿತ ಈರುಳ್ಳಿ ಬೆಳೆಗಳಿಗೆ ಆಗಸ್ಟ್ 14 ಕೊನೆಯ ದಿನಾಂಕವಾಗಿದೆ. ಸಾಲ ಪಡೆದ ರೈತರು ಕೊನೆಯ ಕ್ಷಣದವರೆಗೆ ಕಾಯದೆ ಅಗತ್ಯ ದಾಖಲೆಗಳೊಂದಿಗೆ ಬೆಳೆ ವಿಮೆ ಯೋಜನೆಯಡಿ ನೋಂದಾಯಿಸಿಕೊಳ್ಳುವಂತೆ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

### ಮಹಿಳೆಯರ ಶೌಚಗೃಹ ನಿರ್ಮಾಣಕ್ಕೆ ಆಗ್ರಹ

**ವಿಜಯಸಾಕ್ಷಿ ಸುದ್ದಿ, ಲಕ್ಮೇಶ್ವರ**

ಪಟ್ಟಣದ ಶಿಗ್ಲಿ ರಸ್ತೆಯಲ್ಲಿರುವ ಇಂದಿರಾ ಕ್ಯಾಂಟೀನ್ ಸಮೀಪದ ಖಾಲಿ ಜಾಗದಲ್ಲಿ ಮಹಿಳೆಯರಿಗಾಗಿ ಸುಸಜ್ಜಿತ ಸಾರ್ವಜನಿಕ ಶೌಚಗೃಹ ನಿರ್ಮಿಸಬೇಕೆಂದು ಆಗ್ರಹಿಸಿ, ಶ್ರೀ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಆಟೋ ಚಾಲಕರು ಮತ್ತು ಮಾಲೀಕರ ಸಂಘದ ಪದಾಧಿಕಾರಿಗಳು ಸೋಮವಾರ ಪುರಸಭೆ ಮುಖ್ಯಾಧಿಕಾರಿಗೆ ಮನವಿ ಸಲ್ಲಿಸಿದರು.ಪಟ್ಟಣ ಹಾಗೂ ಸುತ್ತಮುತ್ತಲಿನ ಗ್ರಾಮಗಳಿಂದ ಪ್ರತಿದಿನ ನೂರಾರು ಮಹಿಳೆಯರು ಮತ್ತು ವಿದ್ಯಾರ್ಥಿನಿಯರು ಶಾಲೆ-ಕಾಲೇಜು, ಸರ್ಕಾರಿ ಕಚೇರಿ ಹಾಗೂ ವಿವಿಧ ವ್ಯವಹಾರಗಳ ನಿಮಿತ್ತ ಲಕ್ಮೇಶ್ವರಕ್ಕೆ ಆಗಮಿಸುತ್ತಾರೆ. ಆದರೆ ಮಾರುಕಟ್ಟೆ ಪ್ರದೇಶದಲ್ಲಿ ಮಹಿಳೆಯರಿಗೆ ಸಾರ್ವಜನಿಕ ಶೌಚಗೃಹದ ವ್ಯವಸ್ಥೆ ಇಲ್ಲದಿರುವುದರಿಂದ ತೀವ್ರ ತೊಂದರೆ ಅನುಭವಿಸುವಂತಾಗಿದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

## ಗುರುಪೂರ್ಣಿಮೆಯ ಅಂಗವಾಗಿ ನನ್ನ ಬದುಕು ರೂಪಿಸಿದ ಎಲ್ಲ ಗುರುಗಳಿಗೆ ಹೃದಯಪೂರ್ವಕ ವಂದನೆ

# ಗುರುವೇ ಜಗದ ಆದಿ... ಬದುಕಿನ ಬೆಳಕಾದ ಗುರುಗಳಿಗೆ ಕೃತಜ್ಞ ನಮನ

ಭಾರತೀಯ ಸಂಸ್ಕೃತಿಯಲ್ಲಿ ಆಚಾರ್ಯ ದೇವೋ ಭವ ಎಂಬ ಮಾತು ಕೇವಲ ನುಡಿಯಲ್ಲ, ಬದುಕಿನ ಮೌಲ್ಯವಾಗಿದೆ. ಜುಲೈ 29ರ ಗುರುಪೂರ್ಣಿಮೆ ನಮಗೆ ಜ್ಞಾನ ನೀಡಿದ, ಬದುಕಿನ ದಿಕ್ಕು ತೋರಿದ ಗುರುಗಳನ್ನು ಸ್ಮರಿಸಿ ಗೌರವಿಸುವ ಪವಿತ್ರ ದಿನ.

ಗುರು ಎಂದರೆ ಕೇವಲ ಪಾಠ ಹೇಳುವ ವ್ಯಕ್ತಿಯಲ್ಲ. ಅಜ್ಞಾನವನ್ನು ದೂರ ಮಾಡಿ ಜ್ಞಾನದ ಬೆಳಕಿನತ್ತ ಕರೆದೊಯ್ಯುವ ಮಾರ್ಗದರ್ಶಕ.

ಪುರಂದರದಾಸರು ಹೇಳಿದ ಗುರುವಿನ ಗುಲಾಮನಾಗುವ ತನಕ ದೊರೆಯದಣ್ಣ ಮುಕುತಿ ಎಂಬ ವಾಕ್ಯ ಗುರುಗಳ ಮಹತ್ವವನ್ನು ಸಾರಿ ಹೇಳುತ್ತದೆ.

ಮಾನವನ ಮೊದಲ ಗುರು ತಾಯಿ, ನಂತರ ತಂದೆ. ಆ ಬಳಿಕ ಶಾಲೆಯ ಶಿಕ್ಷಕರು ಬದುಕಿನ ದಾರಿದೀಪವಾಗುತ್ತಾರೆ. ಅಕ್ಷರಜ್ಞಾನದಿಂದ ಜೀವನಜ್ಞಾನದವರೆಗೆ ಪ್ರತಿಯೊಂದು ಹೆಜ್ಜೆಯಲ್ಲೂ ಶಿಕ್ಷಕರ ಪಾತ್ರ ಅನನ್ಯ. ಸಮಾಜದ ಪ್ರತಿಯೊಬ್ಬ ಸಾಧಕನ ಯಶಸ್ಸಿನ ಹಿಂದೆ ಒಬ್ಬ ಶಿಕ್ಷಕನ ಪರಿಶ್ರಮ ಅಡಗಿರುತ್ತದೆ.




ನನ್ನ ಜೀವನದಲ್ಲಿಯೂ ಅನೇಕ ಗುರುಗಳು ತಮ್ಮ ಜ್ಞಾನ, ಪ್ರೀತಿ ಮತ್ತು ಮಾರ್ಗದರ್ಶನದಿಂದ ನನ್ನನ್ನು ರೂಪಿಸಿದ್ದಾರೆ. ರಾಮುಗೇರಿಯ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ನನ್ನ ಶಿಕ್ಷಣಕ್ಕೆ ಅಕ್ಷರ ಬುನಾದಿ ಹಾಕಿದ ಧರುಬಾಯಿ ಗುರುಗಳು, ಓದು-ಬರವಣಿಗೆಯ ಅಭ್ಯಾಸ ಬೆಳೆಸಿದ ಕಳ್ಳಿಮನಿ ಗುರುಗಳು, ಕನ್ನಡ ಮತ್ತು ಸಮಾಜ ವಿಜ್ಞಾನದ ಮೇಲೆ ಆಸಕ್ತಿ ಮೂಡಿಸಿದ ಎಸ್. ಎಸ್. ಮುಳುಗುಂದ ಗುರುಮಾತೆ, ಗಣಿತವನ್ನು ಸರಳವಾಗಿ ಕಲಿಸಿದ ಹೊಳ್ಳಿ ಗುರುಗಳು, ಇಂಗ್ಲಿಷ್ ಭಾಷೆಯ ಮೇಲಿನ ಪ್ರೀತಿಯನ್ನು ಬೆಳೆಸಿದ ಜೆ.ಎಸ್. ರಾಮಶೆಟ್ಟರ ಗುರುಗಳು ಇವರೆಲ್ಲರೂ ನನ್ನ ವ್ಯಕ್ತಿತ್ವ ನಿರ್ಮಾಣದಲ್ಲಿ ಮಹತ್ವದ ಪಾತ್ರವಹಿಸಿದ್ದಾರೆ. ಪ್ರೌಢಶಾಲೆಯ ದಿನಗಳಲ್ಲಿ ಜಿ.ಸಿ. ಕೊಲಕಾರ, ಎಸ್.ಬಿ. ಮುಳ್ಳೂಳ್ಳಿ, ಎಂ.ಬಿ. ಹೊಸಮನಿ, ಯು.ಎ. ಪುಲ್ಲಿ, ಕಾಶೆಟ್ಟಿ, ಎಸ್.ಬಿ. ಪೂಜಾರ, ಮೀನಾಕ್ಷಿ ಮೇಡಂ, ಮಾದರ, ಜಿ.ಡಿ. ಕಲ್ಲಣ್ಣವರ ಹಾಗೂ ನಾವಿ ಗುರುಗಳು ತಮ್ಮದೇ ಆದ ಬೋಧನಾ ಶೈಲಿಯಿಂದ ನನ್ನಲ್ಲಿ ಜ್ಞಾನ, ಆತ್ಮವಿಶ್ವಾಸ ಮತ್ತು ಬದುಕಿನ ಮೌಲ್ಯಗಳನ್ನು ಬೆಳೆಸಿದರು.

ಮುಂದೆ ಕಾಲೇಜು ಶಿಕ್ಷಣಕ್ಕೆ ಆರ್ಥಿಕ ನೆರವು ನೀಡಿ, ಊಟ, ವಸತಿ ಹಾಗೂ ಪ್ರೋತ್ಸಾಹ ನೀಡಿ ನನ್ನ ಬದುಕಿನ ದಿಕ್ಕನ್ನೇ ಬದಲಿಸಿದ ಡಾ. ಬಿ.ಎಫ್. ಚಾಕಲಬ್ಬಿ ಅವರ ಋಣವನ್ನು ಎಂದಿಗೂ ಮರೆಯಲು ಸಾಧ್ಯವಿಲ್ಲ.

ಇಂದು ನಾನು ಶಿಕ್ಷಕ ವೃತ್ತಿಯಲ್ಲಿದ್ದರೆ, ಅದರ ಹಿಂದೆ ಈ ಎಲ್ಲ ಗುರುಗಳ ಆಶೀರ್ವಾದ, ಮಾರ್ಗದರ್ಶನ ಮತ್ತು ಪ್ರೇರಣೆ ಇದೆ. ನನ್ನನ್ನು ರೂಪಿಸಿದ ಪ್ರತಿಯೊಬ್ಬ ಗುರುಗೂ ನಾನು ಜೀವನಪೂರ್ತಿ ಋಣಿ.

ಗುರು ಎಂದರೆ ವ್ಯಕ್ತಿಯಲ್ಲ; ಅಜ್ಞಾನದಿಂದ ಜ್ಞಾನದ ಕಡೆಗೆ ಕರೆದೊಯ್ಯುವ ಶಕ್ತಿ. ಗುರುಪೂರ್ಣಿಮೆಯ ಈ ಪವಿತ್ರ ಸಂದರ್ಭದಲ್ಲಿ ನನ್ನ ಜೀವನಕ್ಕೆ ಬೆಳಕಾದ ಎಲ್ಲ ಗುರುಗಳಿಗೆ ಶಿರಸಾಷ್ಟಾಂಗ ನಮಸ್ಕಾರಗಳು.



ಎಲ್ಲ ಗುರುಗಳಿಗೆ ಗುರುಪೂರ್ಣಿಮೆಯ ಹಾರ್ದಿಕ ಶುಭಾಶಯಗಳು.

**-ಬಸವರಾಜ ಎಂ. ಯರಗುಪ್ಪಿ**

# ಅಮ್ಮ ಅತ್ತೆ ಹೇಳಿದ್ದು ಸುಳ್ಳಲ್ಲ... ಒಳಕಲ್ಲಿನ ರುಚಿಯೇ ಬೇರೆ!

ತವರು ಮನೆಯಲ್ಲಿ ಅಮ್ಮ, ಮದುವೆಯಾದ ಬಳಿಕ ಅತ್ತೆ... ಇಬ್ಬರ ಬಾಯಲ್ಲೂ ಒಂದೇ ಮಾತು ಒಳಕಲ್ಲಿನಲ್ಲಿ ರುಬ್ಬಿದ ಚಟ್ನಿಯ ರುಚಿಯೇ ಬೇರೆ... ಈಗಿನ ಮಿಕ್ಸಿ ಜಾರಿನ ಚಟ್ನಿಗೆ ಆ ಸೊಗಸೇ ಇಲ್ಲ!

ಆಗ ಅವರ ಮಾತು ಕೇಳಿದಾಗ, ಇದೇನು ಒಳಕಲ್ಲಿನ ಪುರಾಣ! ಎಂದು ಮನಸ್ಸಿನಲ್ಲೇ ಗೊಣಗಿಕೊಳ್ಳುತ್ತಿದ್ದ ನಮ್ಮಂಥ ಹುಡುಗಿಯರು ಎಷ್ಟೋ ಜನ ಇರಬಹುದು.

ಕಾಲ ಬದಲಾಗುತ್ತಿದ್ದಂತೆ ಇಂದು ಒಳಕಲ್ಲು ಎಂದರೆ ಕೆಲವರು ಗೂಗಲ್‌ನಲ್ಲಿ ಹುಡುಕುವ ಪರಿಸ್ಥಿತಿ ಬಂದಿದೆ. ಆದರೆ ನಮ್ಮದು ಸಂಪ್ರದಾಯಿಕ ಕುಟುಂಬವಾಗಿದ್ದರಿಂದ ಮನೆಯಲ್ಲೊಂದು ಒಳಕಲ್ಲು ಇತ್ತು. ಅದನ್ನು ನಾನು ಎಂದಿಗೂ ಬಳಸಿರಲಿಲ್ಲ.

ಒಂದು ಭಾನುವಾರ ಇಡ್ಲಿಗೆ ಚಟ್ನಿ ಮಾಡಬೇಕೆಂದು ಸಿದ್ಧತೆ ಮಾಡಿಕೊಂಡಿದ್ದೆ. ಅಷ್ಟರಲ್ಲಿ ವಿದ್ಯುತ್ ಕೈಕೊಟ್ಟಿತು. ಕಾದು ಕಾದು ಬೇಸತ್ತು ಕೊನೆಗೆ ಒಳಕಲ್ಲಿನ ಮೊರೆ ಹೋದೆ.

ಕೊಬ್ಬರಿ, ಹುರಿದ ಕಡಲೆ, ಎಣ್ಣೆಯಲ್ಲಿ ಸ್ವಲ್ಪ ಹುರಿದ ಒಣ ಮೆಣಸಿನಕಾಯಿ, ಕರಿಬೇವು, ಕೊತ್ತಂಬರಿ ಸೊಪ್ಪು, ರುಚಿಗೆ ತಕ್ಕಷ್ಟು ಉಪ್ಪು, ನೆನೆಸಿದ ಹುಣಸೆಹಣ್ಣು, ಚಿಟಿಕೆ ಬೆಲ್ಲ, ಸ್ವಲ್ಪ ಜೀರಿಗೆ... ಎಲ್ಲವನ್ನೂ ಹಾಕಿ ನಿಧಾನವಾಗಿ ರುಬ್ಬಲು ಆರಂಭಿಸಿದೆ.

ಅಬ್ಬಾ... ಮೊದಲ ಸುತ್ತಿನಲ್ಲೇ ಘಮಘಮ ಪರಿಮಳ ಮೂಗಿಗೆ ತಟ್ಟಿತು. ಆ ಸುವಾಸನೆ ತಡೆಯಲಾಗದೆ ಸ್ವಲ್ಪ ಚಟ್ನಿಯನ್ನು ರುಚಿ ನೋಡಿದೆ. ನಿಜಕ್ಕೂ ಅದ್ಭುತ! ನನ್ನ ಪತಿಯೂ ರುಚಿಯ ವ್ಯತ್ಯಾಸವನ್ನು ಗಮನಿಸಿ ಆಶ್ಚರ್ಯಪಟ್ಟರು.

ಆಗ ಅಮ್ಮ ಮತ್ತು ಅತ್ತೆ ಹೇಳುತ್ತಿದ್ದ ಒಳಕಲ್ಲಿನ ಮಹತ್ವ ಎಷ್ಟು ಸತ್ಯ ಎಂಬುದು ಅರ್ಥವಾಯಿತು.



ಅಷ್ಟೇ ಅಲ್ಲ, ಬೆಳಿಗ್ಗೆ ಮಾಡಿದ ಚಟ್ನಿ ಸಂಜೆವರೆಗೂ ಕೆಡದೆ ಅದೇ ರುಚಿಯನ್ನು ಉಳಿಸಿಕೊಂಡಿತ್ತು.

ಮಿಕ್ಸಿಯಲ್ಲಿ ಹೆಚ್ಚಿನ ವೇಗದಿಂದ ಉಂಟಾಗುವ ಉಷ್ಣತೆ ಮತ್ತು ಒಳಕಲ್ಲಿನಲ್ಲಿ ನಿಧಾನವಾಗಿ, ಸಹಜವಾಗಿ ರುಬ್ಬುವ ವಿಧಾನ ಈ ಎರಡರ ನಡುವಿನ ವ್ಯತ್ಯಾಸವನ್ನು ಆ ದಿನ ಸ್ಪಷ್ಟವಾಗಿ ಅನುಭವಿಸಿದೆ.

ತಂತ್ರಜ್ಞಾನ ನಮ್ಮ ಕೆಲಸವನ್ನು ಸುಲಭ ಮಾಡಿದೆ ಎನ್ನುವುದರಲ್ಲಿ ಅನುಮಾನವಿಲ್ಲ. ಆದರೆ ಸಂಪ್ರದಾಯದ ಕೆಲವು ವಿಧಾನಗಳು ಆಹಾರದ ರುಚಿಯನ್ನು ಮಾತ್ರವಲ್ಲ, ಅದರ ಸಹಜ ಗುಣ ಮತ್ತು ಆರೋಗ್ಯವನ್ನೂ ಕಾಪಾಡುತ್ತವೆ ಎಂಬುದನ್ನು ಒಳಕಲ್ಲಿನಲ್ಲಿ ರುಬ್ಬಿದ ಆ ಚಟ್ನಿ ಮತ್ತೊಮ್ಮೆ ನೆನಪಿಸಿತು.

ಸಂಪ್ರದಾಯವನ್ನು ಉಳಿಸಿಕೊಂಡರೆ, ರುಚಿಯೂ ಉಳಿಯುತ್ತದೆ... ಆರೋಗ್ಯವೂ ಉಳಿಯುತ್ತದೆ.

**-ಪವಿತ್ರ ಬಡಿಗೇರ್**

## ವ್ಯಾಸ ಪೂರ್ಣಿಮೆಗುರು ಪೂರ್ಣಿಮೆ ಜ್ಞಾನ, ಸಂಸ್ಕಾರ ಮತ್ತು ಜೀವನ ಮೌಲ್ಯಗಳ ಆರಾಧನೆ

# ಗುರುವೇ ಬದುಕಿನ ಬೆಳಕು

ಭಾರತೀಯ ಸಂಸ್ಕೃತಿಯಲ್ಲಿ ಗುರುಗಳಿಗೆ ಅತ್ಯುನ್ನತ ಸ್ಥಾನವಿದೆ. ಜ್ಞಾನ, ಸಂಸ್ಕಾರ ಮತ್ತು ಸತ್ಪಥದತ್ತ ಮನುಷ್ಯನನ್ನು ಕೊಂಡೊಯ್ಯುವ ಶಕ್ತಿಯೇ ಗುರು. ಅದಕ್ಕಾಗಿಯೇ ಆಷಾಢ ಮಾಸದ ಹುಣ್ಣಿಮೆಯನ್ನು ವ್ಯಾಸ ಪೂರ್ಣಿಮೆ ಅಥವಾ ಗುರು ಪೂರ್ಣಿಮೆ ಎಂದು ಭಕ್ತಿಭಾವದಿಂದ ಆಚರಿಸಲಾಗುತ್ತದೆ.

ಈ ವರ್ಷ ಜುಲೈ 29ರಂದು ಗುರು ಪೂರ್ಣಿಮೆಯನ್ನು ಆಚರಿಸಲಾಗುತ್ತಿದೆ.

ಮಹಾಭಾರತದ ಕರ್ತೃ, ವೇದಗಳನ್ನು ಸಂಗ್ರಹಿಸಿ ವ್ಯವಸ್ಥಿತಗೊಳಿಸಿದ ಮಹರ್ಷಿ ವೇದವ್ಯಾಸರ ಜನ್ಮದಿನವೇ ಗುರು ಪೂರ್ಣಿಮೆ ಎಂದು ಆಚರಿಸಲಾಗುತ್ತದೆ. ಭಾರತೀಯ ಜ್ಞಾನ ಪರಂಪರೆಗೆ ಅವರು ನೀಡಿದ ಕೊಡುಗೆಯನ್ನು ಸ್ಮರಿಸುವ ದಿನವೂ ಇದಾಗಿದೆ.

ಗುರು ಬ್ರಹ್ಮಾ ಗುರು ವಿಷ್ಣುಃ
ಗುರುದೇವೋ ಮಹೇಶ್ವರಃ
ಗುರುಃ ಸಾಕ್ಷಾತ್ ಪರಬ್ರಹ್ಮ
ತಸ್ಮೈ ಶ್ರೀ ಗುರುವೇ ನಮಃ

ಈ ಶ್ಲೋಕವೇ ಗುರುವಿನ ಮಹತ್ವವನ್ನು ಸಂಪೂರ್ಣವಾಗಿ ಸಾರುತ್ತದೆ.

ಸೃಷ್ಟಿಕರ್ತ ಬ್ರಹ್ಮ, ಪಾಲಕ ವಿಷ್ಣು ಮತ್ತು ಸಂಹಾರಕ ಶಿವನ ಸ್ವರೂಪವೇ ಗುರು ಎಂಬ ಭಾವನೆ ಭಾರತೀಯ ಸಂಸ್ಕೃತಿಯ ಮೂಲ ತತ್ತ್ವವಾಗಿದೆ.

ಮಗುವಿನ ಮೊದಲ ಗುರು ತಾಯಿ-ತಂದೆ. ಮನೆಯೇ ಮೊದಲ ಪಾಠಶಾಲೆಯಾದರೆ, ತಾಯಿಯೇ ಮೊದಲ ಶಿಕ್ಷಕಿ. ಅಲ್ಲಿಂದ ಆರಂಭವಾಗುವ ಶಿಕ್ಷಣದ ಪಯಣವನ್ನು ಶಾಲೆಯ ಗುರುಗಳು, ಸಮಾಜದ ಹಿರಿಯರು ಹಾಗೂ ಜೀವನದಲ್ಲಿ ದಾರಿ ತೋರಿದ ಅನೇಕ ವ್ಯಕ್ತಿಗಳು ಮುಂದುವರಿಸುತ್ತಾರೆ.

ಆದ್ದರಿಂದ ಗುರು ಎಂದರೆ ಕೇವಲ ಶಿಕ್ಷಕರಲ್ಲ, ಜೀವನಕ್ಕೆ ಸರಿಯಾದ ದಿಕ್ಕು ತೋರಿಸುವ ಪ್ರತಿಯೊಬ್ಬರೂ ಗುರುಗಳೇ.



ಗುರುವಿನ ಸ್ಥಾನ ಅತ್ಯಂತ ಪವಿತ್ರ ಮತ್ತು ಜವಾಬ್ದಾರಿಯುತವಾದದ್ದು. ಸಮಾಜಕ್ಕೆ ಉತ್ತಮ ನಾಗರಿಕರನ್ನು ರೂಪಿಸುವ ಮಹತ್ತರ ಹೊಣೆಗಾರಿಕೆ ಗುರುವಿನ ಮೇಲಿದೆ. ಪ್ರತಿಯೊಬ್ಬ ಮನುಷ್ಯನಿಗೂ ಜೀವನದಲ್ಲಿ ಒಂದು ಗುರಿ ಇರುತ್ತದೆ. ಆದರೆ ಆ ಗುರಿಯನ್ನು ತಲುಪಲು ಸರಿಯಾದ ಮಾರ್ಗದರ್ಶನ ನೀಡುವವರು ಗುರು.

ಮುಂದೆ ಗುರಿ ಇರಬೇಕು, ಹಿಂದೆ ಗುರು ಇರಬೇಕು ಎಂಬ ಗಾದೆ ಮಾತು ಜೀವನದ ಮಹತ್ವದ ಸತ್ಯವನ್ನು ತಿಳಿಸುತ್ತದೆ. ವಿದ್ಯಾರ್ಥಿಯ ಸಾಧನೆಯ ಹಿಂದೆ ಗುರುವಿನ ಪ್ರೇರಣೆ, ಸಲಹೆ, ಮಾರ್ಗದರ್ಶನ ಮತ್ತು ಆಶೀರ್ವಾದ ಅಡಗಿರುತ್ತದೆ. ಗುರುವಿನ ಮಾರ್ಗದರ್ಶನವಿಲ್ಲದೆ ಜೀವನದ ಪಯಣ ಅಪೂರ್ಣ.

ಇಂದಿನ ತಂತ್ರಜ್ಞಾನದ ಯುಗದಲ್ಲಿ ಮಾಹಿತಿಯನ್ನು ಪಡೆಯುವುದು ಸುಲಭ. ಆದರೆ ಮಾಹಿತಿಯನ್ನು ಜ್ಞಾನವನ್ನಾಗಿ, ಜ್ಞಾನವನ್ನು ಸಂಸ್ಕಾರವನ್ನಾಗಿ ರೂಪಿಸುವ ಶಕ್ತಿ ಗುರುವಿನಲ್ಲಿದೆ. ಉತ್ತಮ ವ್ಯಕ್ತಿತ್ವ, ನೈತಿಕ ಮೌಲ್ಯಗಳು, ಮಾನವೀಯತೆ ಹಾಗೂ ಜೀವನ ಕೌಶಲಗಳನ್ನು ಬೆಳೆಸುವ ನಿಜವಾದ ಶಿಲ್ಪಿ ಗುರು.

ಗುರು ಪೂರ್ಣಿಮೆ ಕೇವಲ ಒಂದು ಆಚರಣೆಯಲ್ಲ. ಅದು ನಮ್ಮ ಬದುಕಿಗೆ ಬೆಳಕು ನೀಡಿದ ಎಲ್ಲ ಗುರುಗಳನ್ನು ಕೃತಜ್ಞತೆಯಿಂದ ಸ್ಮರಿಸುವ ದಿನ. ಅವರ ತ್ಯಾಗ, ಸೇವೆ ಮತ್ತು ಮಾರ್ಗದರ್ಶನಕ್ಕೆ ಗೌರವ ಸಲ್ಲಿಸುವ ದಿನ.

ಈ ಶುಭ ಸಂದರ್ಭದಲ್ಲಿ ನಮ್ಮ ಜೀವನದಲ್ಲಿ ಜ್ಞಾನ ದೀಪ ಬೆಳಗಿಸಿದ ತಾಯಿ-ತಂದೆ, ಶಿಕ್ಷಕರು, ಆಧ್ಯಾತ್ಮಿಕ ಗುರುಗಳು ಹಾಗೂ ಜೀವನದ ಪಥದಲ್ಲಿ ಸನ್ಮಾರ್ಗ ತೋರಿದ ಎಲ್ಲ ಗುರುಗಳಿಗೆ ಹೃದಯಪೂರ್ವಕ ಕೃತಜ್ಞತೆ ಸಲ್ಲಿಸೋಣ.



ಎಲ್ಲ ಗುರುಗಳಿಗೂ ಗುರು ಪೂರ್ಣಿಮೆಯ ಹಾರ್ದಿಕ ಶುಭಾಶಯಗಳು.

**-ವಿ.ಎಂ.ಎಸ್. ಗೋಪಿ**
ಲೇಖಕರು, ಸಾಹಿತಿಗಳು, ಬೆಂಗಳೂರು

# ಜು. 30ರಿಂದ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ ಜಿಲ್ಲಾ ಪ್ರವಾಸ

**ವಿಜಯಸಾಕ್ಷಿ ಸುದ್ದಿ, ಗದಗ**



ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ ಅವರು ಜುಲೈ 30ರಿಂದ ಆಗಸ್ಟ್ 1ರವರೆಗೆ ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ.

ಜುಲೈ 30ರಂದು ಸಂಜೆ ಬಾಗಲಕೋಟೆಯಿಂದ ಗದಗಕ್ಕೆ ಆಗಮಿಸಿ ವಾಸ್ತವ್ಯ ಮಾಡಲಿದ್ದಾರೆ.

ಜುಲೈ 31ರಂದು ಬೆಳಿಗ್ಗೆ ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಹಾಗೂ ನಗರದ ಮಹಿಳಾ ಪೊಲೀಸ್ ಠಾಣೆಗೆ ಭೇಟಿ ನೀಡಲಿದ್ದಾರೆ. ಬಳಿಕ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಆಯೋಜಿಸಿರುವ ಅಧಿನಿಯಮ2013ರ ತರಬೇತಿ ಕಾರ್ಯಾಗಾರ ಹಾಗೂ ಅರಿವು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.


ನಂತರ ರೋಣದಲ್ಲಿ ನಡೆಯುವ ಪೂಜ್ಯ ಮಾತೋಶ್ರೀ ಬಸಮ್ಮನವರು ಸಂಗನಗೌಡರು ಪಾಟೀಲ ಅವರ 72ನೇ ಪುಣ್ಯಸ್ಮರಣೋತ್ಸವ ಅಂಗವಾಗಿ ಆಯೋಜಿಸಿರುವ ಮಹಿಳಾ ಗೋಷ್ಠಿಯನ್ನು ಉದ್ಘಾಟಿಸಲಿದ್ದಾರೆ. ಬಳಿಕ ರೋಣ ತಾಲೂಕು ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ, ಸಂಜೆ ಗದಗದ ರಾಜೀವ ಗಾಂಧಿ ನಗರದಲ್ಲಿರುವ ಸುಡುಗಾಡು ಸಿದ್ಧ ಸಮುದಾಯದ ಮೂಲಭೂತ ಸೌಲಭ್ಯಗಳನ್ನು ಪರಿಶೀಲಿಸಲಿದ್ದಾರೆ.

ಆಗಸ್ಟ್ 1ರಂದು ಜಿಲ್ಲಾ ಆಡಳಿತ ಭವನದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಮಹಿಳಾ ಸಂಘವನ್ನು ಉದ್ಘಾಟಿಸಿ, ವಿವಿಧ ಕಾಲೇಜುಗಳ ವಿದ್ಯಾರ್ಥಿನಿಯರೊಂದಿಗೆ ಸಂವಾದ ಹಾಗೂ ಅರಿವು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

ಬಳಿಕ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಹಿಳಾ ಪ್ರಗತಿ ಪರಿಶೀಲನಾ ಸಭೆ ನಡೆಸಿ, ಲೈಂಗಿಕ ಕಿರುಕುಳ ತಡೆ () ಅಧಿನಿಯಮದ ಅನುಷ್ಠಾನ, ಮಹಿಳಾ ದೌರ್ಜನ್ಯ ಪ್ರಕರಣಗಳು, ಆಂತರಿಕ ದೂರು ಸಮಿತಿಗಳ ಕಾರ್ಯನಿರ್ವಹಣೆ, ಮಹಿಳಾ ಮೀಸಲಾತಿ ಹಾಗೂ ಮಹಿಳೆಯರ ಸುರಕ್ಷತೆಗೆ ಜಿಲ್ಲಾಡಳಿತ ಕೈಗೊಂಡಿರುವ ಕ್ರಮಗಳ ಕುರಿತು ಅಧಿಕಾರಿಗಳೊಂದಿಗೆ ಚರ್ಚೆ ನಡೆಸಲಿದ್ದಾರೆ ಎಂದು ರಾಜ್ಯ ಮಹಿಳಾ ಆಯೋಗದ ಪ್ರಕಟಣೆ ತಿಳಿಸಿದೆ.

## ಗದಗ ಜಿಲ್ಲಾ ದ್ವಿತೀಯ ಮಕ್ಕಳ ಶರಣ ಸಾಹಿತ್ಯ ಸಮ್ಮೇಳನಕ್ಕೆ ಸರ್ವಾಧ್ಯಕ್ಷರಾಗಿ ಆಯ್ಕೆ

# ಡಾ. ನಿಂಗು ಸೊಲಗಿ ಹೆಗಲಿಗೆ ಸಮ್ಮೇಳನದ ಹೊಣೆ



**ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಗದಗ ಜಿಲ್ಲಾ ಘಟಕದ ಆಶ್ರಯದಲ್ಲಿ ಆಗಸ್ಟ್ 1ರಂದು ಗದಗ ತಾಲೂಕಿನ ಹೊಸಳ್ಳಿ ಗ್ರಾಮದ ಜಗದ್ಗುರು ಬೂದೀಶ್ವರ ಮಠದ ಆವರಣದಲ್ಲಿ ನಡೆಯಲಿರುವ ಗದಗ ಜಿಲ್ಲಾ ದ್ವಿತೀಯ ಮಕ್ಕಳ ಶರಣ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಜಿಲ್ಲೆಯ ಹಿರಿಯ ಮಕ್ಕಳ ಸಾಹಿತಿ, ಚಿಂತಕ ಡಾ. ನಿಂಗು ಸೊಲಗಿ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಗಿದೆ.

ಶನಿವಾರ ಸಂಜೆ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳ ನಿಯೋಗವು ಮುಂಡರಗಿಯಲ್ಲಿರುವ ಡಾ. ನಿಂಗು ಸೊಲಗಿ ಅವರ ನಿವಾಸಕ್ಕೆ ಭೇಟಿ ನೀಡಿ, ಸಮ್ಮೇಳನದ ಸರ್ವಾಧ್ಯಕ್ಷರಾಗಿ ಅಧಿಕೃತ ಆಹ್ವಾನ ಪತ್ರ ನೀಡಿ ಗೌರವಿಸಿತು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎ. ಬಳಿಗಾರ, ಬಸವಾದಿ ಶರಣರ ವಿಚಾರ ಧಾರೆ ಹಾಗೂ ನೈತಿಕ ಮೌಲ್ಯಗಳನ್ನು ಬಾಲವನಸ್ಸುಗಳಲ್ಲಿ ಬಿತ್ತುವ ಪವಿತ್ರ ಕಾರ್ಯವನ್ನು ಮಕ್ಕಳ ಶರಣ ಸಾಹಿತ್ಯ ಸಮ್ಮೇಳನಗಳು ಯಶಸ್ವಿಯಾಗಿ ನಿರ್ವಹಿಸುತ್ತಿವೆ. ಬಳಗಾನೂರಿನಲ್ಲಿ ಮೊದಲ ಮಕ್ಕಳ ಶರಣ ಸಾಹಿತ್ಯ ಸಮ್ಮೇಳನವನ್ನು ಯಶಸ್ವಿಯಾಗಿ ನಡೆಸಿದ ಬಳಿಕ ಇದೀಗ ಎರಡನೇ ಸಮ್ಮೇಳನವನ್ನು ಆಯೋಜಿಸಲಾಗುತ್ತಿದೆ ಎಂದರು.

ಡಾ. ನಿಂಗು ಸೊಲಗಿ ಅವರು ಕಳೆದ ಮೂರು ದಶಕಗಳಿಗೂ ಹೆಚ್ಚು ಕಾಲ ಶಿಕ್ಷಕ, ಸಾಹಿತಿ, ಸಂಶೋಧಕ ಹಾಗೂ ಸಂಪನ್ಮೂಲ ವ್ಯಕ್ತಿಯಾಗಿ ಸೇವೆ ಸಲ್ಲಿಸಿದ್ದು, ಮಕ್ಕಳ ಸಾಹಿತ್ಯ ಕ್ಷೇತ್ರಕ್ಕೆ ಹತ್ತಕ್ಕೂ ಹೆಚ್ಚು ಕವನ ಸಂಕಲನಗಳು ಹಾಗೂ ಸಂಪಾದಿತ ಕೃತಿಗಳನ್ನು ನೀಡಿದ್ದಾರೆ. ಮಕ್ಕಳ ರಂಗಭೂಮಿ ಕುರಿತು ಸಂಶೋಧನೆ ನಡೆಸಿ ಹಂಪಿ ಕನ್ನಡ ವಿಶ್ವವಿದ್ಯಾಲಯದಿಂದ ಪಿಎಚ್.ಡಿ ಪದವಿ ಪಡೆದಿದ್ದಾರೆ. 2014ರಲ್ಲಿ ಕೇಂದ್ರ ಸರ್ಕಾರದ ರಾಷ್ಟ್ರ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಸೇರಿದಂತೆ ಹಲವು ಗೌರವಗಳಿಗೆ ಭಾಜನರಾಗಿದ್ದಾರೆ ಎಂದು ವಿವರಿಸಿದರು.

ಸರ್ವಾಧ್ಯಕ್ಷರ ಆಹ್ವಾನ ಸ್ವೀಕರಿಸಿದ ಡಾ. ನಿಂಗು ಸೊಲಗಿ ಮಾತನಾಡಿ, ಕಳೆದ 33 ವರ್ಷಗಳಿಂದ ಮುಂಡರಗಿಯ ಜನರ ಪ್ರೀತಿ, ವಿಶ್ವಾಸ ಹಾಗೂ ಬೆಂಬಲವೇ ತಮ್ಮ ಸಾಹಿತ್ಯಿಕ ಪಯಣಕ್ಕೆ ಪ್ರೇರಣೆಯಾಗಿದೆ. ಸಮಾಜ ನೀಡಿದ ಗೌರವವನ್ನು ಸಮಾಜಕ್ಕೇ ಅರ್ಪಿಸುವ ಮನೋಭಾವದಿಂದ ಸಮ್ಮೇಳನದ ಸರ್ವಾಧ್ಯಕ್ಷ ಸ್ಥಾನವನ್ನು ಅತ್ಯಂತ ವಿನಯದಿಂದ ಸ್ವೀಕರಿಸುತ್ತಿದ್ದೇನೆ ಎಂದು ಹೇಳಿದರು.

**ಸಮಾಜವೇ ನನಗೆ ಶಿಕ್ಷಣ ನೀಡಿದೆ, ಸಮಾಜವೇ ನನ್ನನ್ನು ಬೆಳೆಸಿದೆ. ಆದ್ದರಿಂದ ನನ್ನ ಜೀವನ ಮತ್ತು ಸಾಹಿತ್ಯದ ಸೇವೆ ಸಮಾಜಕ್ಕಾಗಿಯೇ ಮೀಸಲು.**
**- ಡಾ. ನಿಂಗು ಸೊಲಗಿ,** ಸರ್ವಾಧ್ಯಕ್ಷರು, ಗದಗ ಜಿಲ್ಲಾ ದ್ವಿತೀಯ ಮಕ್ಕಳ ಶರಣ ಸಾಹಿತ್ಯ ಸಮ್ಮೇಳನ

ಶಿರಹಟ್ಟಿ ತಾಲೂಕು ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಎಂ.ಕೆ. ಲಮಾಣಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾರ್ಯದರ್ಶಿ ಬೂದಪ್ಪ ಅಂಗಡಿ, ಕೋಶಾಧ್ಯಕ್ಷ ಡಿ.ಎಸ್. ಬಾಪುರೆ, ಗಜೇಂದ್ರಗಡ ತಾಲೂಕು ಅಧ್ಯಕ್ಷ ಬಸವರಾಜ ಕೊಟಗಿ, ಗದಗ ಗ್ರಾಮೀಣ ಘಟಕದ ಅಧ್ಯಕ್ಷ ಎಸ್.ಎಂ. ಮರಿಗೌಡ್ರ, ವೀರೇಶ ಬದಾಮಿ, ಕಳಕಯ್ಯ ಸಾಲಿಮಠ, ಬಿ.ಕೆ. ನಿಂಬಣಗೌಡ್ರ, ಪ್ರಸನ್ನ ಕೊಟಗಿ, ಕಾಶಿನಾಥ ಶಿರಬಡಗಿ, ಎಂ.ಜಿ. ಗಚ್ಚಣ್ಣವರ, ಎಸ್.ಎಂ. ಹೊಸಮಠ, ಎಸ್.ಸಿ. ಚಕ್ಕಡಿಮಠ, ಮಂಜುನಾಥ ತೆಗ್ಗಿನಮನಿ, ಮಂಜುನಾಥ ಇಟಗಿ, ಎಸ್.ಸಿ. ಹರ್ತಿ, ಎನ್.ಎಸ್. ಶೀರನಹಳ್ಳಿ, ಮಂಜುನಾಥ ಮುಧೋಳ, ಎಂ.ಎಸ್. ಶೀರನಹಳ್ಳಿ, ಸುರೇಶ್ ಭಾವಿಹಳ್ಳಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಅಂಗವಿಕಲರಿಗೆ ಮಾಸಾಶನ, ಉಚಿತ ಪ್ರಯಾಣಕ್ಕೆ ಒತ್ತಾಯ

**ವಿಜಯಸಾಕ್ಷಿ ಸುದ್ದಿ, ಗದಗ**

ಅಂಗವಿಕಲರು ಹಾಗೂ ಹಿರಿಯ ನಾಗರಿಕರಿಗೆ ಪ್ರತಿ ತಿಂಗಳ 5ನೇ ತಾರೀಕಿನೊಳಗೆ ಮಾಸಾಶನ ವಿತರಿಸಬೇಕು ಹಾಗೂ ಅದಕ್ಕೆ ಆದಾಯ ಮಿತಿಯನ್ನು ವಿಧಿಸಬಾರದು ಎಂದು ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ್ ಶೆಟ್ಟಿ ಬಣ) ವಿಕಲಚೇತನರ ಘಟಕದ ಅಧ್ಯಕ್ಷ ರಾಘವೇಂದ್ರ ಮಿಶ್ರೆನ್ನವರ ಆಗ್ರಹಿಸಿದರು. ಸೋಮವಾರ ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂಗವಿಕಲರಿಗೆ ರಾಜ್ಯಾದ್ಯಂತ ಉಚಿತ ಬಸ್ ಪ್ರಯಾಣದ ಸೌಲಭ್ಯ ಕಲ್ಪಿಸಬೇಕು. ಬಸ್‌ಗಳಲ್ಲಿ ಮೀಸಲು ಆಸನ ವ್ಯವಸ್ಥೆ ಮಾಡಬೇಕು. ಎಲ್ಲ ಸರ್ಕಾರಿ ಇಲಾಖೆಗಳ ಹೊರಗುತ್ತಿಗೆ ನೇಮಕಾತಿಯಲ್ಲಿ ಅಂಗವಿಕಲರಿಗೆ ಆದ್ಯತೆ ನೀಡಬೇಕು ಹಾಗೂ ಅವರಿಗಾಗಿ ಮೀಸಲಿರುವ ಶೇ.5ರಷ್ಟು ಅನುದಾನವನ್ನು ಸಮರ್ಪಕವಾಗಿ ಬಳಸಬೇಕು ಎಂದು ಒತ್ತಾಯಿಸಿದರು.

ಸರ್ಕಾರಿ ವಾಣಿಜ್ಯ ಮಳಿಗೆಗಳಲ್ಲಿ ಅಂಗವಿಕಲರಿಗೆ ಆದ್ಯತೆ ನೀಡಬೇಕು. ವಸತಿ ಸೌಲಭ್ಯ ಕಲ್ಪಿಸಬೇಕು. ಶೇ.40ಕ್ಕಿಂತ ಹೆಚ್ಚು ಅಂಗವೈಕಲ್ಯ ಹೊಂದಿರುವವರಿಗೆ ಯಂತ್ರಚಾಲಿತ ವಾಹನ ವಿತರಿಸಬೇಕು. ಸರ್ಕಾರಿ ಕಚೇರಿಗಳಲ್ಲಿ ಲಿಫ್ಟ್ ಆಪರೇಟರ್ ಹುದ್ದೆಗಳಿಗೆ ಅಂಗವಿಕಲರನ್ನೇ ನೇಮಕ ಮಾಡಬೇಕು ಎಂದು ಆಗ್ರಹಿಸಿದರು. ಅಂಗವಿಕಲರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಶೀಘ್ರದಲ್ಲೇ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಗುವುದು ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಘಟಕದ ಅಧ್ಯಕ್ಷ ಪರಶುರಾಮ ಆರ್. ಬೆಟಗೇರಿ, ಕೊಟ್ರೇಶ್ ಹೊನಗುಡಿ, ಪಾಂಡುರಂಗ ಹೆಬ್ಬಾರ, ಮಂಜುನಾಥ ಜಾಲಗಾರ, ದುರ್ಗಪ್ಪ ಸಂಕನಕಲ್, ವೆಂಕಪ್ಪ, ಖಾಜಾ ಹುಸೇನ್ ಕಾತರಕಿ ಹಾಗೂ ಕೃಷ್ಣ ಜಾದವ್ ಉಪಸ್ಥಿತರಿದ್ದರು.

## ಸಂಕ್ಷಿಪ್ತ ಸುದ್ದಿಗಳು

### ಆ.22, 23ರಂದು ಧಾರವಾಡದಲ್ಲಿ ಚಲನ ಚಿತ್ರೋತ್ಸವ

# ಅಂತಾರಾಷ್ಟ್ರೀಯ ಚಲನ ಚಿತ್ರೋತ್ಸವ ಯಶಸ್ವಿಗೊಳಿಸಿ



**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಉತ್ತರ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ವತಿಯಿಂದ ಆಗಸ್ಟ್ 22 ಹಾಗೂ 23ರಂದು ಆಯೋಜಿಸಿರುವ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ2026ವನ್ನು ನಿರ್ಮಾಪಕರು, ನಿರ್ದೇಶಕರು, ಕಲಾವಿದರು ಹಾಗೂ ತಂತ್ರಜ್ಞರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ಮೂಲಕ ಯಶಸ್ವಿಗೊಳಿಸಬೇಕು ಎಂದು ಮಂಡಳಿಯ ಕಾರ್ಯಾಧ್ಯಕ್ಷ ಡಾ. ಕಲ್ಮೇಶ ಹಾವೇರಿಪೇಠ ಕರೆ ನೀಡಿದರು. ನಗರದಲ್ಲಿ ನಡೆದ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ಪೂರ್ವಭಾವಿ ಸಭೆ ಹಾಗೂ ಸದಸ್ಯತ್ವ ನೋಂದಣಿ ಅಭಿಯಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ಚಲನಚಿತ್ರೋತ್ಸವದ ಯಶಸ್ವಿ ಆಯೋಜನೆಗಾಗಿ ವಿವಿಧ ಕಾರ್ಯಕಾರಿ ಸಮಿತಿಗಳನ್ನು ರಚಿಸಿ, ಜವಾಬ್ದಾರಿಗಳ ಹಂಚಿಕೆ ಹಾಗೂ ಮುಂದಿನ ಕಾರ್ಯಯೋಜನೆಗಳ ಕುರಿತು ಸವಿಸ್ತಾರವಾಗಿ ಚರ್ಚಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಂಡಳಿಯ ಅಧ್ಯಕ್ಷ ಮಂಜುನಾಥ ಹಗೇದಾರ ಮಾತನಾಡಿ, ಮಂಡಳಿ ಇನ್ನಷ್ಟು ಕ್ರಿಯಾಶೀಲವಾಗಲು ಪ್ರತಿಯೊಬ್ಬ ಸದಸ್ಯರ ಸಹಕಾರ ಅಗತ್ಯ. ನಾಲ್ಕು ನೂರಕ್ಕೂ ಹೆಚ್ಚು ನಿರ್ಮಾಪಕರು ಸಂಘದ ಸದಸ್ಯರಾಗಿದ್ದು, ಚಿತ್ರ ನಿರ್ಮಾಣಕ್ಕೆ ಮಂಡಳಿ ಅಗತ್ಯ ಸಹಕಾರ ನೀಡಲಿದೆ. ಈಗಾಗಲೇ ಹಲವು ಸದಸ್ಯರು ಚಿತ್ರ ನಿರ್ಮಾಣದಲ್ಲಿ ತೊಡಗಿಕೊಂಡಿದ್ದು, ನೋಂದಾಯಿತ ಸದಸ್ಯರಿಗೆ ಚಿತ್ರರಂಗದಲ್ಲಿ ಹೆಚ್ಚಿನ ಅವಕಾಶಗಳನ್ನು ಕಲ್ಪಿಸಲಾಗುತ್ತಿದೆ ಎಂದು ತಿಳಿಸಿದರು.

ಚಲನಚಿತ್ರ ಸಹನಿರ್ದೇಶಕ ದೀಪಕ ಇಂಡಿ, ನಿರ್ದೇಶಕ ಶಾಂತಕುಮಾರ ಪಾಟೀಲ, ಕಲಾವಿದ ಜೂನಿಯರ್ ರಾಜಕುಮಾರ ಪ್ರಕಾಶ ರಾಜಕುಮಾರ ಬಡ್ನಿ, ದ್ಯಾಪೂರ ಸರ್, ರಾಜೀವಸಿಂಗ್ ಹಲವಾಯಿ, ಪ್ರೇಮಾ ನಡುವಿನಮನಿ, ವಿಕ್ರಮ್ ಕುಮಠಾ, ಜೂನಿಯರ್ ಉಪೇಂದ್ರ ಬಾಬು ಸೇರಿದಂತೆ ವಿಜಯಪುರ, ಬಾಗಲಕೋಟ, ಬೆಳಗಾವಿ, ಇಂಡಿ ಮತ್ತಿತರ ಭಾಗಗಳಿಂದ ಆಗಮಿಸಿದ್ದ ನಿರ್ಮಾಪಕರು, ನಿರ್ದೇಶಕರು, ಕಲಾವಿದರು ಹಾಗೂ ತಂತ್ರಜ್ಞರು ತಮ್ಮ ಅಭಿಪ್ರಾಯ ಮತ್ತು ಸಲಹೆಗಳನ್ನು ಹಂಚಿಕೊಂಡರು. ಮಂಡಳಿಯಿಂದ ಸದಸ್ಯರಿಗೆ ಕಲ್ಪಿಸಲಾಗುತ್ತಿರುವ ವಿವಿಧ ಸೌಲಭ್ಯಗಳ ಕುರಿತು ಪ್ರಧಾನ ಕಾರ್ಯದರ್ಶಿ ರಾಹುಲ್ ದತ್ತಪ್ರಸಾದ ಮಾಹಿತಿ ನೀಡಿದರು. ಇದೇ ವೇಳೆ ಡಾ. ಕಲ್ಮೇಶ ಹಾವೇರಿಪೇಠ ಅವರ ಜನ್ಮದಿನವನ್ನು ಕೇಕ್ ಕತ್ತರಿಸುವ ಮೂಲಕ ಆಚರಿಸಿ ಶುಭ ಕೋರಲಾಯಿತು.

ಸಲಹಾ ಮಂಡಳಿ ಸದಸ್ಯರಾದ ಅನಿಶ್ ಭರೂದವಾಲೆ, ಮಮ್ಮಿಗಟ್ಟಿ ಹಾಗೂ ಡಾ. ಪ್ರಭು ಗಂಜಿಹಾಳ ಚಿತ್ರೋತ್ಸವದ ಮಹತ್ವ ಕುರಿತು ಮಾತನಾಡಿದರು. ವೇದಿಕೆಯಲ್ಲಿ ಮಂಡಳಿಯ ಪದಾಧಿಕಾರಿಗಳು ಉಪಸ್ಥಿತರಿದ್ದರು. ಪ್ರಭು ಹಂಚಿನಾಳ ಪ್ರಾಸ್ತಾವಿಕವಾಗಿ ಮಾತನಾಡಿ ಕಾರ್ಯಕ್ರಮ ನಿರೂಪಿಸಿದರು. ಅರವಿಂದ ಮುಳಗುಂದ ವಂದಿಸಿದರು.

**ಉತ್ತರ ಕರ್ನಾಟಕದ ಚಿತ್ರರಂಗದ ಬೆಳವಣಿಗೆಗೆ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ಮಹತ್ವದ ವೇದಿಕೆಯಾಗಿದ್ದು, ಎಲ್ಲರೂ ಸಕ್ರಿಯವಾಗಿ ಭಾಗವಹಿಸಿ ಯಶಸ್ವಿಗೊಳಿಸಬೇಕು.**

**- ಡಾ. ಕಲ್ಮೇಶ ಹಾವೇರಿಪೇಠ,** ಕಾರ್ಯಾಧ್ಯಕ್ಷರು

## ಚೆನ್ನಮ್ಮ ದೇವೇಗೌಡರಿಗೆ ಭಾವಪೂರ್ಣ ನಮನ

**ವಿಜಯಸಾಕ್ಷಿ ಸುದ್ದಿ, ನವಲಗುಂದ**

ಇತ್ತೀಚೆಗೆ ನಿಧನರಾದ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರ ಪತ್ನಿ ಚೆನ್ನಮ್ಮ ದೇವೇಗೌಡ ಅವರಿಗೆ ನವಲಗುಂದ ವಿಧಾನಸಭಾ ಕ್ಷೇತ್ರದ ಜೆಡಿಎಸ್ ಮುಖಂಡರು ಹಾಗೂ ಕಾರ್ಯಕರ್ತರು ಶ್ರದ್ಧಾಂಜಲಿ ಸಲ್ಲಿಸಿ, ಅವರ ವ್ಯಕ್ತಿತ್ವ ಹಾಗೂ ಸಮಾಜಮುಖಿ ಬದುಕನ್ನು ಸ್ಮರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮುಖಂಡರು, ಚೆನ್ನಮ್ಮ ದೇವೇಗೌಡ ಅವರು ದೇವೇಗೌಡರ ರಾಜಕೀಯ ಬದುಕಿನ ಹಿಂದಿನ ಪ್ರೇರಣಾಶಕ್ತಿಯಾಗಿದ್ದರು. ಮನೆಗೆ ಬಂದ ಪ್ರತಿಯೊಬ್ಬರನ್ನೂ ಆತ್ಮೀಯವಾಗಿ ಬರಮಾಡಿಕೊಂಡು ಊಟ ಮಾಡಿಸದೆ ಕಳುಹಿಸದ ಅವರ ಆತಿಥ್ಯ ಎಲ್ಲರಿಗೂ ಮಾದರಿಯಾಗಿತ್ತು ಎಂದು ಹೇಳಿದರು. ಅತ್ಯಂತ ದೈವಭಕ್ತೆಯಾಗಿದ್ದ ಅವರು ದೇವೇಗೌಡ ಹಾಗೂ ಎಚ್.ಡಿ. ಕುಮಾರಸ್ವಾಮಿ ಅವರಿಗೆ ಸದಾ ಜನಪರ ಆಡಳಿತ ನಡೆಸುವಂತೆ ಸಲಹೆ ನೀಡುತ್ತಿದ್ದರು. ಅವರ ಮಾರ್ಗದರ್ಶನವನ್ನು ದೇವೇಗೌಡರು ಹಾಗೂ ಕುಮಾರಸ್ವಾಮಿ ಹೃದಯಪೂರ್ವಕವಾಗಿ ಸ್ವೀಕರಿಸಿದ್ದರಿಂದ ಜನಪರ ಆಡಳಿತ ನೀಡಲು ಸಾಧ್ಯವಾಯಿತು ಎಂದು ಸ್ಮರಿಸಿದರು.

ಶ್ರದ್ಧಾಂಜಲಿ ಸಭೆಯಲ್ಲಿ ಧಾರವಾಡ ಗ್ರಾಮೀಣ ಜಿಲ್ಲಾ ಜೆಡಿಎಸ್ ಅಧ್ಯಕ್ಷ ಬಿ.ಬಿ. ಗಂಗಾಧರಮಠ, ಮಾಜಿ ಸಚಿವ ಕೆ.ಎನ್. ಗಡ್ಡಿ, ಮುಖಂಡರಾದ ಸಿ.ಎಸ್. ಪಾಟೀಲ, ಜಿ.ಎನ್. ತೋಟದ, ಶಿವಶಂಕರ ಕಲ್ಲೂರ, ಡಿ.ಎಂ. ಶಲವಡಿ, ವೀರೇಶ ಶಾನುಭೋಗರ, ಶ್ರೀಶೈಲ ಮೂಲಿಮನಿ, ಮಹಾಂತೇಶ ಗಂಗಾಧರಮಠ, ಅಬ್ಬಾಸ್ ಅಲಿ ದೇವರಡು, ಶಾಂತಪ್ಪ ನೀರಲಗಿ, ಮಲ್ಲಪ್ಪ ಮಡಿವಾಳರ, ಮಂಜುನಾಥ ಹಡಪದ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ನಿಡಗುಂದಿ ಶಾಲೆಯಲ್ಲಿ ಸಂಸತ್ ಪದಾಧಿಕಾರಿಗಳ ಪ್ರಮಾಣವಚನ

# ಇಂದಿನ ವಿದ್ಯಾರ್ಥಿಗಳೇ ನಾಳಿನ ಜನಪ್ರತಿನಿಧಿಗಳು



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪ್ರಜಾಪ್ರಭುತ್ವವು ಕೇವಲ ಮತದಾನಕ್ಕೆ ಸೀಮಿತವಾಗದೆ, ಜವಾಬ್ದಾರಿಯುತ ನಾಯಕತ್ವ, ಸೇವಾ ಮನೋಭಾವ ಹಾಗೂ ಸಾಮಾಜಿಕ ಬದ್ಧತೆಯನ್ನು ಬೆಳೆಸುವ ಜೀವನ ಪದ್ಧತಿಯಾಗಿದೆ. ಇಂತಹ ಪ್ರಜಾಸತ್ತಾತ್ಮಕ ಮೌಲ್ಯಗಳನ್ನು ವಿದ್ಯಾರ್ಥಿಗಳಲ್ಲಿ ಬಾಲ್ಯದಿಂದಲೇ ಬೆಳೆಸಲು ಶಾಲಾ ಸಂಸತ್ತಿನ ರಚನೆ ಅತ್ಯಗತ್ಯ ಎಂದು ನಿಡಗುಂದಿಯ ಶ್ರೀ ಅನ್ನದಾನೇಶ್ವರ ಪ್ರೌಢಶಾಲೆಯ ಸ್ಥಾನಿಕ ಆಡಳಿತ ಮಂಡಳಿ ಸದಸ್ಯ ಎಸ್.ಎಚ್. ಕೊಪ್ಪದ ಹೇಳಿದರು.

ಶಾಲೆಯಲ್ಲಿ 2026-27ನೇ ಶೈಕ್ಷಣಿಕ ಸಾಲಿನ ಶಾಲಾ ಸಂಸತ್ ಪದಾಧಿಕಾರಿಗಳ ಆಯ್ಕೆ ಹಾಗೂ ಪ್ರಮಾಣವಚನ ಸ್ವೀಕಾರ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಭಾರತೀಯ ಸಂಸತ್ತಿನ ಮಾದರಿಯಲ್ಲಿ ಶಾಲಾ ಸಂಸತ್ತಿನ ರಚನೆಯು ವಿದ್ಯಾರ್ಥಿಗಳಲ್ಲಿ ನಾಯಕತ್ವ, ಪ್ರಾಮಾಣಿಕತೆ, ಕರ್ತವ್ಯನಿಷ್ಠೆ, ಸಹಕಾರ ಮನೋಭಾವ ಹಾಗೂ ಸಾರ್ವಜನಿಕ ಸೇವೆಯಂತಹ ಮೌಲ್ಯಗಳನ್ನು ಬೆಳೆಸುವ ಅರ್ಥಪೂರ್ಣ ಹೆಜ್ಜೆಯಾಗಿದೆ. ಇಂದಿನ ವಿದ್ಯಾರ್ಥಿಗಳೇ ನಾಳಿನ ಪ್ರಜೆಗಳು ಮತ್ತು ಜನಪ್ರತಿನಿಧಿಗಳಾಗಲಿದ್ದು, ಶಾಲಾ ಸಂಸತ್ತಿನ ಅನುಭವವು ಅವರ ವ್ಯಕ್ತಿತ್ವ ವಿಕಸನಕ್ಕೆ ಭದ್ರ ಅಡಿಪಾಯವಾಗಲಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಆಡಳಿತ ಮಂಡಳಿಯ ಸ್ಥಾನಿಕ ಅಧ್ಯಕ್ಷ ಜಗದೀಶ ಕರಡಿ ಮಾತನಾಡಿ, ಅಧಿಕಾರವನ್ನು ಪ್ರತಿಷ್ಠೆಯ ಸಂಕೇತವಾಗಿ ಅಲ್ಲ, ಸೇವೆಯ ಸಾಧನವಾಗಿ ಪರಿಗಣಿಸಿ ವಿದ್ಯಾರ್ಥಿ ಪ್ರತಿನಿಧಿಗಳು ಸಹಪಾಠಿಗಳ ಸಮಸ್ಯೆಗಳಿಗೆ ಸ್ಪಂದಿಸಬೇಕು. ಶಿಸ್ತು, ಪ್ರಾಮಾಣಿಕತೆ ಮತ್ತು ಸೇವಾ ಮನೋಭಾವವೇ ಉತ್ತಮ ನಾಯಕತ್ವದ ಗುಣಗಳಾಗಿವೆ ಎಂದು ತಿಳಿಸಿದರು. ಮುಖ್ಯ ಶಿಕ್ಷಕ ಎಂ.ಬಿ. ಕೊಪ್ಪದ ಮಾತನಾಡಿ, ಶಾಲಾ ಸಂಸತ್ತು ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ, ಸಂಘಟನಾ ಕೌಶಲ್ಯ, ನಿರ್ಧಾರ ಕೈಗೊಳ್ಳುವ ಸಾಮರ್ಥ್ಯ ಹಾಗೂ ತಂಡದೊಂದಿಗೆ ಕಾರ್ಯನಿರ್ವಹಿಸುವ ಗುಣಗಳನ್ನು ಬೆಳೆಸುವ ಪರಿಣಾಮಕಾರಿ ವೇದಿಕೆಯಾಗಿದೆ. ಪ್ರತಿಯೊಬ್ಬರೂ ತಮ್ಮ ಜವಾಬ್ದಾರಿಯನ್ನು ಪ್ರಾಮಾಣಿಕವಾಗಿ ನಿರ್ವಹಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಶಿಕ್ಷಕ ಎಸ್.ವಿ. ಹಳ್ಳಿಕೇರಿ ಶಾಲಾ ಸಂಸತ್ತಿನ ಉದ್ದೇಶ, ರಚನೆ ಹಾಗೂ ವಿವಿಧ ಸಚಿವರ ಕರ್ತವ್ಯಗಳ ಕುರಿತು ಮಾಹಿತಿ ನೀಡಿದರು. ಬಳಿಕ ಶಿಕ್ಷಕ ಜೆ.ಪಿ. ಗೋಂದಳೆ ನೂತನ ಪದಾಧಿಕಾರಿಗಳಿಗೆ ಪ್ರಮಾಣವಚನ ಬೋಧಿಸಿದರು. 2026-27ನೇ ಸಾಲಿನ ಶಾಲಾ ಸಂಸತ್ತಿನ ಪ್ರಧಾನಮಂತ್ರಿಯಾಗಿ ಮಲ್ಲಿಕಾರ್ಜುನ ಗಡಾದ, ಉಪಪ್ರಧಾನಮಂತ್ರಿಯಾಗಿ ಸ್ವಾತಿ ಕಳಕಾಪೂರ ಆಯ್ಕೆಯಾದರು.

**ಶಾಲಾ ಸಂಸತ್ತು ವಿದ್ಯಾರ್ಥಿಗಳಲ್ಲಿ ನಾಯಕತ್ವ, ಜವಾಬ್ದಾರಿ ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಬೆಳೆಸುವ ಅತ್ಯುತ್ತಮ ವೇದಿಕೆಯಾಗಿದೆ.**

**- ಎಸ್.ಎಚ್. ಕೊಪ್ಪದ,** ಸ್ಥಾನಿಕ ಆಡಳಿತ ಮಂಡಳಿ ಸದಸ್ಯರು

ವಿವಿಧ ಸಚಿವ ಸ್ಥಾನಗಳಿಗೆ ಅನಿಲ ದೇಸಾಯಿ, ಅಮೃತಾ ಕಂಬಳಿ, ವೀರಭದ್ರ ಗಡಾದ, ಶ್ವೇತಾ ಧರಣೆಪ್ಪಗೌಡ, ಮನೋಜ ಡುಮ್ಮನವರ, ಶಾಹಿನಾ ನದಾಫ್, ಶಾವು ಬಾಣದ, ಲಕ್ಷ್ಮೀ ಕಂಬಳಿ, ಕಂಠೆಪ್ಪ ಕಾಲವಾಡ, ಅನ್ನಪೂರ್ಣ ಗಡಾದ, ವಿನೋದ ದಿವಟರ, ಪ್ರಿಯಾಂಕಾ ಗುರಿಕಾರ, ಅಭಿಷೇಕ ಭೂಸನೂರಮಠ, ವಿಜಯ ಮಠಪತಿ, ಧನರಾಜ ಕರಮುಡಿ ಸೇರಿದಂತೆ ಹಲವು ವಿದ್ಯಾರ್ಥಿಗಳು ಆಯ್ಕೆಯಾದರು. ಕಾರ್ಯಕ್ರಮದಲ್ಲಿ ಶಿಕ್ಷಕರಾದ ಕೆ.ಬಿ. ಗಡಾದ, ಎಸ್.ಬಿ. ಹಿರೇಮಠ, ನಂದಾ ಮೆಣಸಗಿ, ಪೂಜಾ ಅಂಗಡಿ, ಬಿ.ಪಿ. ಕಾಗಿ, ಚೇತನ್ ಭೂಸನೂರಮಠ, ವೀರಣ್ಣ ಅರಮನಿ ಹಾಗೂ ಸಂತೋಷ ಚಿಲ್ಲಝರಿ ಉಪಸ್ಥಿತರಿದ್ದರು.

ಎಚ್.ಬಿ. ಕಟ್ಟಿಮನಿ ಕಾರ್ಯಕ್ರಮ ನಿರೂಪಿಸಿದರು.

### ನರೇಗಲ್ಲದಲ್ಲಿ ಪತ್ರಿಕಾ ದಿನಾಚರಣೆ; ನಿವೃತ್ತ ಸೈನಿಕರಿಗೆ ಸನ್ಮಾನ

# ಪತ್ರಿಕೋದ್ಯಮ ಕೇವಲ ವೃತ್ತಿಯಲ್ಲ, ಅದು ಸಾಮಾಜಿಕ ಜವಾಬ್ದಾರಿ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪತ್ರಿಕೋದ್ಯಮ ಕೇವಲ ವೃತ್ತಿಯಲ್ಲ, ಅದು ಸಮಾಜದ ಮೇಲಿನ ಮಹತ್ತರ ಜವಾಬ್ದಾರಿಯಾಗಿದೆ. ಪತ್ರಕರ್ತರು ಸತ್ಯ, ನಿಷ್ಪಕ್ಷಪಾತ ಮತ್ತು ಸಾಮಾಜಿಕ ಹೊಣೆಗಾರಿಕೆಯನ್ನು ಅಳವಡಿಸಿಕೊಂಡು ತಮ್ಮ ಕರ್ತವ್ಯ ವನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಹಿರಿಯ ಪತ್ರಕರ್ತ ಅರುಣ ಕುಲಕರ್ಣಿ ಹೇಳಿದರು.

ಪಟ್ಟಣದ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಹಿರೇಅಳಗುಂಡಿಯ ಚನ್ನು ಪಾಟೀಲ ಫೌಂಡೇಷನ್ ವತಿಯಿಂದ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮುಖ್ಯ ಅತಿಥಿಯಾಗಿ ಮಾತನಾಡಿದರು.

ಕನ್ನಡದ ಮೊದಲ ಪತ್ರಿಕೆ ಔಮಂಗಳೂರು ಸಮಾಚಾರಟ 1843ರ ಜುಲೈ 1ರಂದು ಮಂಗಳೂರಿನಲ್ಲಿ ಪ್ರಕಟವಾಗಿದ್ದು, ಅದರ ಸ್ಮರಣಾರ್ಥವಾಗಿ ಪ್ರತಿ ವರ್ಷ ಜುಲೈ 1ರಂದು ಪತ್ರಿಕಾ ದಿನಾಚರಣೆ ಆಚರಿಸಲಾಗುತ್ತದೆ. ಕನ್ನಡದ ಮೊದಲ ಪತ್ರಿಕೆಯನ್ನು ಹರ್ಮನ್ ಮೊಗ್ಲಿಂಗ್ ಆರಂಭಿಸಿದ್ದರು ಎಂದು ಅವರು ತಿಳಿಸಿದರು.

ಪತ್ರಿಕಾ ದಿನಾಚರಣೆಯ ಉದ್ದೇಶ ಪತ್ರಕರ್ತರ ಸೇವೆಯನ್ನು ಗೌರವಿಸುವುದು, ಪತ್ರಿಕೋದ್ಯಮದ ಇತಿಹಾಸವನ್ನು ಸ್ಮರಿಸುವುದು ಹಾಗೂ ಸತ್ಯನಿಷ್ಠ, ನಿಷ್ಪಕ್ಷಪಾತ ಮತ್ತು ಜವಾಬ್ದಾರಿಯುತ ಪತ್ರಿಕೋದ್ಯಮಕ್ಕೆ ಉತ್ತೇಜನ ನೀಡುವುದಾಗಿದೆ ಎಂದು ಹೇಳಿದರು.

ಪತ್ರಕರ್ತರು ಸತ್ಯ ಮತ್ತು ನಿಖರತೆ, ನಿಷ್ಪಕ್ಷಪಾತತೆ, ಸಾಮಾಜಿಕ ಹೊಣೆಗಾರಿಕೆ, ಜನರ ಧ್ವನಿಗೆ ಧ್ವನಿಯಾಗುವುದು, ಸುಳ್ಳು ಸುದ್ದಿಯಿಂದ ದೂರವಿರುವುದು, ನೈತಿಕತೆ, ಗೌಪ್ಯತೆ, ಕಾನೂನಿಗೆ ಗೌರವ ಹಾಗೂ ಸಂವೇದನಾಶೀಲ ವರದಿಗಾರಿಕೆ ಸೇರಿದಂತೆ ಹಲವು ಜವಾಬ್ದಾರಿಗಳನ್ನು ಪ್ರಾಮಾಣಿಕವಾಗಿ ನಿಭಾಯಿಸಬೇಕು ಎಂದು ಕರೆ ನೀಡಿದರು.

ರಾಜ್ಯದಲ್ಲಿ 15 ರಾಜ್ಯಮಟ್ಟದ ದಿನಪತ್ರಿಕೆಗಳು ಹಾಗೂ 200ಕ್ಕೂ ಹೆಚ್ಚು ಜಿಲ್ಲಾ ಮಟ್ಟದ ಪತ್ರಿಕೆಗಳು ಕಾರ್ಯನಿರ್ವಹಿಸುತ್ತಿದ್ದು, ಸರ್ಕಾರ ಮತ್ತು ಜನರ ನಡುವೆ ಸೇತುವೆಯಾಗಿ ಮಾಧ್ಯಮಗಳು ಕಾರ್ಯನಿರ್ವಹಿಸಬೇಕಿದೆ ಎಂದು ಅಭಿಪ್ರಾಯಪಟ್ಟರು.

ಇದೇ ಸಂದರ್ಭದಲ್ಲಿ ಕಾರ್ಗಿಲ್ ವಿಜಯ್ ದಿವಸ್ ಅಂಗವಾಗಿ ನಿವೃತ್ತ ಸೈನಿಕರನ್ನು ಸನ್ಮಾನಿಸಲಾಯಿತು. ಪತ್ರಕರ್ತ ನಿಂಗರಾಜ ಬೇವಿನಕಟ್ಟಿ ಮಾತನಾಡಿ, ಸೈನಿಕರು ದೇಶದ ನಿಜವಾದ ಹೀರೋಗಳಾಗಿದ್ದು, ಅವರ ತ್ಯಾಗ ಮತ್ತು ಸೇವೆಯಿಂದಲೇ ದೇಶದ ಜನರು ನೆಮ್ಮದಿಯಿಂದ ಬದುಕಲು ಸಾಧ್ಯವಾಗಿದೆ ಎಂದು ಹೇಳಿದರು.

ನಿವೃತ್ತ ಸೈನಿಕರ ಸಂಘದ ಅಧ್ಯಕ್ಷ ಶಿವಪುತ್ರಪ್ಪ ಸಂಗನಾಳ ಮಾತನಾಡಿ, ಕಾರ್ಗಿಲ್ ವಿಜಯ್ ದಿವಸ್ ಅಂಗವಾಗಿ ತಮ್ಮನ್ನು ಸನ್ಮಾನಿಸಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದು ಕೃತಜ್ಞತೆ ಸಲ್ಲಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮುತ್ತಣ್ಣ ಪಲ್ಲೇದ ಮಾತನಾಡಿ, ಪತ್ರಕರ್ತರು ಜನರ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತರುವ ಮಹತ್ವದ ಕಾರ್ಯ ಮಾಡುತ್ತಿದ್ದಾರೆ. ಪತ್ರಿಕಾ ದಿನಾಚರಣೆಯೊಂದಿಗೆ ನಿವೃತ್ತ ಸೈನಿಕರನ್ನು ಗೌರವಿಸಿರುವುದು ಚನ್ನು ಪಾಟೀಲ ಫೌಂಡೇಷನ್‌ನ ಸಮಾಜಮುಖಿ ಕಾರ್ಯಕ್ಕೆ ಸಾಕ್ಷಿಯಾಗಿದೆ ಎಂದು ಹೇಳಿದರು.

**ಪತ್ರಿಕೋದ್ಯಮ ಕೇವಲ ವೃತ್ತಿಯಲ್ಲ; ಅದು ಸಮಾಜದ ಮೇಲಿನ ಜವಾಬ್ದಾರಿ. ಸತ್ಯ, ನಿಷ್ಪಕ್ಷಪಾತ ಮತ್ತು ಸಾಮಾಜಿಕ ಹೊಣೆಗಾರಿಕೆಯನ್ನು ಅಳವಡಿಸಿಕೊಂಡು ಪತ್ರಕರ್ತರು ತಮ್ಮ ಕರ್ತವ್ಯ ನಿರ್ವಹಿಸಬೇಕು.**

**- ಅರುಣ ಕುಲಕರ್ಣಿ,** ಹಿರಿಯ ಪತ್ರಕರ್ತ

ಬ್ರಹ್ಮಕುಮಾರಿ ಸವಿತಕ್ಕ ಮಾತನಾಡಿ, ಪರೋಪಕಾರದ ಗುಣದಿಂದ ಜೀವನ ಸಾರ್ಥಕವಾಗುತ್ತದೆ. ಇಂತಹ ಸಮಾಜ ಮುಖಿ ಕಾರ್ಯಕ್ರಮಕ್ಕೆ ತಮ್ಮ ಸಂಸ್ಥೆ ಸಾಕ್ಷಿಯಾಗಿರುವುದು ಸಂತಸದ ಸಂಗತಿ ಎಂದರು.

ವೇದಿಕೆಯಲ್ಲಿ ನಿವೃತ್ತ ಸೈನಿಕರ ಸಂಘದ ಗೌರವಾಧ್ಯಕ್ಷ ಶರಣಪ್ಪ ನಾಶಿಪುಡಿ ಉಪಸ್ಥಿತರಿದ್ದರು.

ಚನ್ನು ಪಾಟೀಲ ಫೌಂಡೇಷನ್‌ನ ಸಂಸ್ಥಾಪಕ ಉಮೇಶ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿ ಸಂಸ್ಥೆಯ ಧ್ಯೇಯೋದ್ದೇಶಗಳನ್ನು ವಿವರಿಸಿದರು. ಶಿವಕುಮಾರ ದಡ್ಡೂರ ಕಾರ್ಯಕ್ರಮ ನಿರೂಪಿಸಿದರು. ಉಮೇಶ ಪಾಟೀಲ ಸ್ವಾಗತಿಸಿದರು.

### ಲಕ್ಕುಂಡಿ ವಲಯ ಮಟ್ಟದ ಪ್ರೌಢಶಾಲಾ ಕ್ರೀಡಾಕೂಟಕ್ಕೆ ಚಾಲನೆ

# ಕ್ರೀಡೆಯಲ್ಲಿ ಕೌಶಲ್ಯದಿಂದ ಯಶಸ್ಸು ಸಾಧ್ಯ



**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ವಿದ್ಯಾರ್ಥಿಗಳು ಕ್ರೀಡೆಯಲ್ಲಿ ಯಶಸ್ಸು ಸಾಧಿಸಬೇಕಾದರೆ ಉತ್ತಮ ತರಬೇತಿಯೊಂದಿಗೆ ಕೌಶಲ್ಯವನ್ನು ಬೆಳೆಸಿಕೊಳ್ಳಬೇಕು. ಸೋಲು-ಗೆಲುವನ್ನು ಸಮಾನವಾಗಿ ಸ್ವೀಕರಿಸಿ ಕ್ರೀಡಾಸ್ಫೂರ್ತಿಯಿಂದ ಸ್ಪರ್ಧೆಗಳಲ್ಲಿ ಭಾಗವಹಿಸಬೇಕು ಎಂದು ಶಾಲಾ ಶಿಕ್ಷಣ ಇಲಾಖೆಯ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಗಾಯತ್ರಿ ಹೇಳಿದರು.

ಇಲ್ಲಿನ ಬಾಲಕಿಯರ ಸರ್ಕಾರಿ ಪ್ರೌಢಶಾಲೆಯಲ್ಲಿ ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿ ಕಾರ್ಯಾಲಯ ಗ್ರಾಮೀಣ ವಲಯದ ಸಹಯೋಗದಲ್ಲಿ ಆಯೋಜಿಸಿದ್ದ ಲಕ್ಕುಂಡಿ ವಲಯ ಮಟ್ಟದ ಪ್ರೌಢಶಾಲಾ ಕ್ರೀಡಾಕೂಟವನ್ನು ಕ್ರೀಡಾ ಧ್ವಜಾರೋಹಣದ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ನಿರ್ಣಾಯಕರ ತೀರ್ಪನ್ನು ಗೌರವಿಸಿ ಪ್ರಾಮಾಣಿಕವಾಗಿ ಸ್ಪರ್ಧೆಗಳಲ್ಲಿ ಭಾಗವಹಿಸುವ ಮೂಲಕ ಕ್ರೀಡೆಯ ಗೌರವವನ್ನು ಕಾಪಾಡಬೇಕು. ಕಳೆದ ಸಾಲಿನಲ್ಲಿ ಗದಗ ಜಿಲ್ಲೆಯಿಂದ ಎಂಟು ಕ್ರೀಡಾಪಟುಗಳು ರಾಷ್ಟ್ರಮಟ್ಟದಲ್ಲಿ, 195 ಕ್ರೀಡಾಪಟುಗಳು ರಾಜ್ಯಮಟ್ಟದಲ್ಲಿ ಭಾಗವಹಿಸಿದ್ದು, 25 ಮಂದಿ ಪ್ರಶಸ್ತಿ ಪಡೆದಿರುವುದು ಜಿಲ್ಲೆಯ ಹೆಮ್ಮೆಯಾಗಿದೆ ಎಂದು ತಿಳಿಸಿದರು.

ಪ್ರೌಢಶಾಲೆ ಸಹ ಶಿಕ್ಷಕರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಬಿ.ಎಫ್. ಪೂಜಾರ ಕ್ರೀಡಾ ಜ್ಯೋತಿಯನ್ನು ಸ್ವಾಗತಿಸಿ ಮಾತನಾಡಿ, ಗ್ರಾಮಸ್ಥರು ಕ್ರೀಡಾಕೂಟಕ್ಕೆ ಸಹಾಯಹಸ್ತ ನೀಡುತ್ತಿರುವುದು ಶ್ಲಾಘನೀಯ. ಕ್ರೀಡೆಯಿಂದ ಮಕ್ಕಳಲ್ಲಿ ನಾಯಕತ್ವ, ಸ್ಪರ್ಧಾತ್ಮಕ ಮನೋಭಾವ, ಸಹೋದರತ್ವ ಹಾಗೂ ರಾಷ್ಟ್ರ ಪ್ರೇಮದಂತಹ ಮೌಲ್ಯಗಳು ಬೆಳೆಯುತ್ತವೆ ಎಂದರು. ಮಾಜಿ ಯೋಧ ದತ್ತಾತ್ರೇಯ ಜೋಶಿ ಮಾತನಾಡಿ, ಮೊಬೈಲ್ ಮತ್ತು ದೂರ ದರ್ಶನದ ಅತಿಯಾದ ಬಳಕೆಯಿಂದ ಗ್ರಾಮೀಣ ಕ್ರೀಡೆಗಳಲ್ಲಿ ಭಾಗವಹಿಸುವಿಕೆ ಕಡಿಮೆಯಾಗುತ್ತಿದೆ. ಆರೋಗ್ಯವೇ ನಿಜವಾದ ಸಂಪತ್ತು. ಆದ್ದರಿಂದ ಪ್ರತಿ ಯೊಬ್ಬರೂ ಕ್ರೀಡೆಯನ್ನು ಜೀವನದ ಭಾಗವಾಗಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

**ಸೋಲು-ಗೆಲುವನ್ನು ಸಮಾನವಾಗಿ ಸ್ವೀಕರಿಸಿ, ಕೌಶಲ್ಯ ಮತ್ತು ಕ್ರೀಡಾಸ್ಫೂರ್ತಿಯಿಂದ ಸ್ಪರ್ಧೆಗಳಲ್ಲಿ ಭಾಗವಹಿಸಿದರೆ ಯಶಸ್ಸು ನಿಮ್ಮದಾಗುತ್ತದೆ.**

**- ಗಾಯತ್ರಿ,** ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ

ನಿವೃತ್ತ ಉಪನ್ಯಾಸಕ ನೀಲಕಂಠ ಮುಕ್ಕಣ್ಣವರ ಮಾತನಾಡಿ, ಆಟವನ್ನು ಖುಷಿಗಾಗಿ ಆಡಬೇಕು. ಸೋಲು ಯಶಸ್ಸಿನ ಮೆಟ್ಟಿಲಾಗಿದ್ದು, ಸೋತಾಗ ನಿರಾಶರಾಗದೆ ಮತ್ತಷ್ಟು ಉತ್ಸಾಹದಿಂದ ಮುಂದಿನ ಸ್ಪರ್ಧೆಗೆ ಸಿದ್ಧರಾಗಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಕ್ರೀಡಾಕೂಟಕ್ಕೆ ದೇಣಿಗೆ ನೀಡಿದ ದಾನಿಗಳನ್ನು ಸನ್ಮಾನಿಸಲಾಯಿತು.


ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮುಖ್ಯೋಪಾಧ್ಯಾಯಿನಿ ಜೆ.ಆರ್. ಶೆಟ್ಟರ್ ವಹಿಸಿದ್ದರು.

ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಕೆ.ಎಸ್. ಪೂಜಾರ, ಜನತಾ ವಿದ್ಯಾವರ್ಧಕ ಸಂಸ್ಥೆಯ ನಿರ್ದೇಶಕ ವೀರಯ್ಯ ಗಂಧದ, ದೈಹಿಕ ಶಿಕ್ಷಕರ ಸಂಘದ ಅಧ್ಯಕ್ಷ ರಾಜು ಚವಾಣ, ಕರ್ನಾಟಕ ಕದಂಬ ರಕ್ಷಣಾ ವೇದಿಕೆಯ ರಾಜ್ಯ ಮಹಿಳಾ ಘಟಕದ ಅಧ್ಯಕ್ಷೆ ಡಾ. ಕವಿತಾ ಬಡಿಗೇರ, ದೈಹಿಕ ಶಿಕ್ಷಣಾಧಿಕಾರಿ ಎಂ.ವಿ. ಪಾಟೀಲ, ಸಿ.ವೈ. ಮೇಲಿನಮನಿ, ಎಸ್‌ಡಿಎಂಸಿ ಅಧ್ಯಕ್ಷ ರಮಜಾನಸಾಬ ತಹಶೀಲ್ದಾರ, ಅಶೋಕ ಬೂದಿಹಾಳ, ಮಹಾಂತೇಶ ಕಮತರ, ಕುಬೇರಪ್ಪ ಬೆಂತೂರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಅನ್ನಪೂರ್ಣ ಹಣವಾಳ ಮತ್ತು ಸಂಗಡಿಗರು ಪ್ರಾರ್ಥಿಸಿದರು. ಎಂ.ಬಿ. ಗುಡಗೂರು ಸ್ವಾಗತಿಸಿದರು. ಜೆ.ವಿ. ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ವೈ.ವೈ. ಬೆಟಗೇರಿ ಹಾಗೂ ಎಸ್.ಎಚ್. ಶೆಟ್ಟಿನಾಯ್ಕರ ಕಾರ್ಯಕ್ರಮ ನಿರೂಪಿಸಿದರು. ಎಸ್.ಇ. ಹಿರೇಮಠ ವಂದಿಸಿದರು.

### ಗದಗದಲ್ಲಿ ಶ್ರೀ ಸಾಯಿಬಾಬಾ ಸತ್ಸಂಗದ ಪ್ರವಚನ ಮಾಲಿಕೆ | ವೈದ್ಯ ಡಾ. ಎಸ್.ಬಿ. ಶೆಟ್ಟರ ಹೇಳಿಕೆ

# ಗುರುಭಕ್ತಿ, ನಾಮಸ್ಮರಣೆ ಬದುಕಿನ ನಿಜವಾದ ದಾರಿ




**ವಿಜಯಸಾಕ್ಷಿ ಸುದ್ದಿ, ಗದಗ**

ಗುರುನಲ್ಲಿ ಸಂಪೂರ್ಣ ಶರಣಾಗತಿ, ನಿರಂತರ ನಾಮಸ್ಮರಣೆ ಹಾಗೂ ಆತ್ಮಜ್ಞಾನವೇ ಮನುಷ್ಯನ ಬದುಕಿನ ನಿಜವಾದ ದಾರಿಯಾಗಿದೆ. ಕಾಯ, ವಾಚ, ಮನಸ್ಸಿನ ತ್ರಿಕರಣ ಶುದ್ಧಿಯೊಂದಿಗೆ ಪರಮಾತ್ಮನ ನಾಮಸ್ಮರಣೆ ಮಾಡಿದಾಗ ಮಾತ್ರ ಮಾಯೆಯನ್ನು ಜಯಿಸಲು ಸಾಧ್ಯ ಎಂದು ಚಿಂತಕ ಹಾಗೂ ವೈದ್ಯ ಡಾ. ಎಸ್.ಬಿ. ಶೆಟ್ಟರ ಹೇಳಿದರು.ಗುರುಪೂರ್ಣಿಮೆ ಅಂಗವಾಗಿ ಗದಗ-ಬೆಟಗೇರಿ ಶ್ರೀ ಶಿರಡಿ ಸಾಯಿಬಾಬಾ ಸತ್ಸಂಗ ವತಿಯಿಂದ ನಗರದ ಶ್ರೀ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಭಾನುವಾರ ಆಯೋಜಿಸಿದ್ದ ಶ್ರೀ ಸಾಯಿ ಸಚ್ಚರಿತ್ರೆ ಪ್ರವಚನ ಮಾಲಿಕೆ-8ರಲ್ಲಿ ಅವರು ಮಾತನಾಡಿದರು.

ಭಕ್ತಿ, ತಾಳ್ಮೆ ಹಾಗೂ ಸಂಪೂರ್ಣ ಶರಣಾಗತಿ ಹೊಂದಿದವರನ್ನು ಸದ್ಗುರು ಎಂದಿಗೂ ಕೈಬಿಡುವುದಿಲ್ಲ. ಸಂಕಷ್ಟಗಳು ಎಷ್ಟೇ ದೊಡ್ಡದಾಗಿದ್ದರೂ ಗುರುಕೃಪೆಯಿಂದ ಅವು ದೂರವಾಗುತ್ತವೆ. ಸಾಯಿಬಾಬಾರ ಲೀಲೆಗಳು ಭಕ್ತರಲ್ಲಿ ಆತ್ಮವಿಶ್ವಾಸ, ನಂಬಿಕೆ ಹಾಗೂ ಸತ್ಸಂಕಲ್ಪವನ್ನು ಬೆಳೆಸುತ್ತವೆ ಎಂದು ಹೇಳಿದರು.

ಸಾಯಿಬಾಬಾರವರು ತಮ್ಮ ಮಹಾಸಮಾಧಿಯ ಸಮಯವನ್ನು ಮುಂಚಿತವಾಗಿಯೇ ಸೂಚಿಸಿದ್ದರು. ವಿಜಯದಶಮಿಯಂದು ಲಕ್ಷ್ಮೀಬಾಯಿಗೆ ಒಂಬತ್ತು ರೂಪಾಯಿಗಳನ್ನು ದಕ್ಷಿಣೆಯಾಗಿ ನೀಡಿ ನವವಿಧ ಭಕ್ತಿಯ ಸಂದೇಶ ಸಾರಿದ ಅವರು, ಬಳಿಕ ತಮ್ಮ ದೇಹವನ್ನು ಬೂಟಿವಾಡಾದಲ್ಲಿ ಸಮಾಧಿ ಮಾಡುವಂತೆ ಭಕ್ತರಿಗೆ ಸೂಚಿಸಿದ್ದರು ಎಂದು ವಿವರಿಸಿದರು.

ಬಾಬಾರವರ ದೇಹತ್ಯಾಗದ ಸಂದರ್ಭದಲ್ಲಿ ಅವರ ದೇಹದಿಂದ ಹೊರಹೊಮ್ಮಿದ ಜ್ಯೋತಿ ನಾಲ್ಕು ಭಾಗಗಳಾಗಿ ವಿಭಜನೆಗೊಂಡು ಗುರುಸ್ಥಾನ, ದ್ವಾರಕಾಮಾಯಿ, ಚಾವಡಿ ಹಾಗೂ ಬೂಟಿವಾಡಾಕ್ಕೆ ತೆರಳಿದೆಯೆಂಬ ಪರಂಪರಾಗತ ನಂಬಿಕೆಯನ್ನು ಉಲ್ಲೇಖಿಸಿದ ಅವರು, ಇಂದಿಗೂ ಈ ನಾಲ್ಕು ಪವಿತ್ರ ಸ್ಥಳಗಳಲ್ಲಿ ಬಾಬಾರವರ ಸಾನ್ನಿಧ್ಯವನ್ನು ಭಕ್ತರು ಅನುಭವಿಸುತ್ತಿದ್ದಾರೆ ಎಂದರು.

ಭಕ್ತನ ಶ್ರದ್ಧೆ ಮತ್ತು ನಂಬಿಕೆಯ ಮೇಲೆಯೇ ಸಾಯಿಬಾಬಾರವರ ಅನುಗ್ರಹ ಅವಲಂಬಿತವಾಗಿದೆ. ಗುರುವಿನ ಮೇಲೆ ಅಚಲ ವಿಶ್ವಾಸ ಹೊಂದಿದವರಿಗೆ ದೈವಾನುಗ್ರಹ ದೊರೆಯುತ್ತದೆ ಎಂದು ಹೇಳಿದ ಅವರು, ಸಂತಾನ ಭಾಗ್ಯವಿಲ್ಲದ ದಂಪತಿಗೆ ಸಾಯಿಬಾಬಾರವರು ಆಶೀರ್ವದಿಸಿದ ಸಚ್ಚರಿತ್ರೆಯ ಪ್ರಸಂಗವನ್ನು ಉದಾಹರಿಸಿದರು. ಪ್ರವಚನದ ಅಂತ್ಯದಲ್ಲಿ ಆದಿ ಶಂಕರಾಚಾರ್ಯರ ನಿರ್ವಾಣ ಷಟ್ಕಂ ಶ್ಲೋಕಗಳನ್ನು ಉಲ್ಲೇಖಿಸಿ, ನಾನು ಯಾರು? ಎಂಬ ಆತ್ಮವಿಚಾರವೇ ಆತ್ಮಸಾಕ್ಷಾತ್ಕಾರಕ್ಕೆ ದಾರಿಯಾಗಿದೆ. ದೇಹ ನಶ್ವರವಾದರೂ ಆತ್ಮ ಶಾಶ್ವತವಾಗಿದ್ದು, ಭಕ್ತಿ, ಪ್ರೀತಿ, ಧ್ಯಾನ, ವೈರಾಗ್ಯ ಹಾಗೂ ಆತ್ಮಜ್ಞಾನವೇ ಆಧ್ಯಾತ್ಮಿಕ ಬದುಕಿನ ಮೂಲಾಧಾರಗಳಾಗಿವೆ ಎಂದು ತಿಳಿಸಿದರು.

**ಗುರುನಲ್ಲಿ ಸಂಪೂರ್ಣ ಶರಣಾಗತಿ, ನಿರಂತರ ನಾಮಸ್ಮರಣೆ ಮತ್ತು ಆತ್ಮಜ್ಞಾನವೇ ಮನುಷ್ಯನ ಬದುಕಿನ ನಿಜವಾದ ದಾರಿ.**

**- ಡಾ. ಎಸ್.ಬಿ. ಶೆಟ್ಟರ,** ಚಿಂತಕ ಹಾಗೂ ವೈದ್ಯ


### ಇಂದು ಗುರುಪೂರ್ಣಿಮೆ ವಿಶೇಷ ಆಚರಣೆ

**ಜುಲೈ 29ರಂದು ಗುರುಪೂರ್ಣಿಮೆ ಅಂಗವಾಗಿ ಬೆಳಿಗ್ಗೆ 6 ಗಂಟೆಗೆ ಕಾಕಡ ಆರತಿ, ಬಳಿಕ ಮಂಗಳಸ್ನಾನ, ರುದ್ರಾಭಿಷೇಕ ಹಾಗೂ ಅಲಂಕಾರ ಪೂಜೆ ನಡೆಯಲಿದೆ. ಮಧ್ಯಾಹ್ನ 12 ಗಂಟೆಗೆ ಪಂಚಾರತಿ, ಪುಷ್ಪಾರ್ಚನೆ ಹಾಗೂ ಮಹಾ ಅನ್ನಸಂತರ್ಪಣೆ ಏರ್ಪಡಿಸಲಾಗಿದೆ. ಸಂಜೆ 5 ಗಂಟೆಗೆ ಸಾಮೂಹಿಕ ಶ್ರೀ ಸತ್ಯನಾರಾಯಣ ಪೂಜೆ, ಸೂರ್ಯಾಸ್ತದ ಬಳಿಕ ಧೂಪಾರತಿ, ಪಲ್ಲಕ್ಕಿ ಉತ್ಸವ ಹಾಗೂ ರಾತ್ರಿ 10 ಗಂಟೆಗೆ ಶೇಜಾರತಿ ನಡೆಯಲಿದೆ.**

ಈ ಸಂದರ್ಭದಲ್ಲಿ ಪ್ರಸಾದದ ಭಕ್ತಿ ಸೇವೆ ಸಲ್ಲಿಸಿದ ಡಾ. ನಿರಜ ಶೆಟ್ಟರ್, ಡಾ. ಎಸ್.ಡಿ. ಯರಗೇರಿ, ರುದ್ರಪ್ಪ ಅರಳಿ, ಚೇತನ ಧನ್ನೂರಹಿರೇಮಠ, ಗಂಗಾಧರ ಅಬ್ಬಿಗೇರಿ, ಮಲ್ಲಿಕಾರ್ಜುನ ಸರ್ವಿ, ಪೂಜಾ ಗೌರಿಪುರ, ವಿಜಯಮಹಾಂತೇಶ ಕೋಟಿ, ಗಾಯತ್ರಿ ಕಾತರಕಿ, ಬಸವರಾಜ ಚಿನ್ನಾಪೂರ ಹಾಗೂ ರತ್ನಾ ಮುಗಳಿ ಅವರನ್ನು ಸನ್ಮಾನಿಸಲಾಯಿತು. ಮಹೇಶಗೌಡ ತಲೆಗೌಡ್ರ ಸ್ವಾಗತಿಸಿದರು. ಸದಾಶಿವಪ್ಪ ವಾಲಿ ವಂದಿಸಿದರು. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

## ನಿಧನ

### ಡಾ. ಮುತ್ತಪ್ಪ ಪಟ್ಟೇದ



**ಗದಗ:** ನಗರದ ಜವಳಗಲ್ಲಿಯ ನಿವಾಸಿಗಳು, ಪ್ರಸಿದ್ಧ ಡಾಕ್ಟರ್ ಆಗಿದ್ದ ಡಾ. ಮುತ್ತಪ್ಪ ಪಟ್ಟೇದ (72) ಮಂಗಳವಾರ ರಾತ್ರಿ ಬೆಂಗಳೂರಿನಲ್ಲಿ ವಯೋಸಹಜ ಸಮಸ್ಯೆಯಿಂದ ನಿಧನರಾದರು.

ಮೃತರ ಅಂತ್ಯಕ್ರಿಯೆ ಬುಧವಾರ ಬೆಂಗಳೂರಿನಲ್ಲಿ ನಡೆಯಲಿದೆ.

ಮೃತರು ಪತ್ನಿ, ಪುತ್ರಿಯರು, ಅಳಿಯಂದಿರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗವನ್ನು ಹೊಂದಿದ್ದರು.

